MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 298 | ಶನಿವಾರ : 13-09-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 298 | SATURDAY : 13-09-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಉಪರಾಷ್ಟ್ರಪತಿಯಾಗಿ ರಾಧಾಕೃಷ್ಣನ್ ಪದಗ್ರಹಣ



ದೇಶದ 15ನೇ ಉಪರಾಷ್ಟ್ರಪತಿಯಾಗಿ ರಾಧಾಕೃಷ್ಣನ್ ಇಂದು ಪ್ರಮಾಣ ವಚನ ಸ್ವೀಕರಿಸಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರಮಾಣ ವಚನ ಬೋಧಿಸಿದರು.

**ನವದೆಹಲಿ,ಸೆ.12–** ದೇಶದ 15ನೇ ಉಪರಾಷ್ಟ್ರಪತಿಯಾಗಿ ಚಂದ್ರಪುರಂ ಪೊನ್ನುಸಾಮಿ ರಾಧಾಕೃಷ್ಣನ್ ಅವರು ಇಂದು ಅಧಿಕಾರ ಸ್ವೀಕರಿಸಿದರು, ಈ ಮೂಲಕ ಇಂದಿನಿಂದ ಉಪರಾಷ್ಟ್ರಪತಿ ಮತ್ತು ರಾಜ್ಯಸಭೆಯ ಸಭಾಪತಿಯ ಸ್ಥಾನ ಅಲಂಕರಿಸಿದ್ದಾರೆ.

ರಾಷ್ಟ್ರಪತಿ ಭವನದಲ್ಲಿ ಇಂದು ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನೂತನ ಉಪ ರಾಷ್ಟ್ರಪತಿ ಸಿಪಿ ರಾಧಾಕೃಷ್ಣನ್ ಅವರಿಗೆ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ವಚನ ಬೋಧಿಸಿದರು.

ಈ ವೇಳೆ ಪ್ರಧಾನಿ ನರೇಂದ್ರ ಮೋದಿ, ಉಪ ಸಭಾಪತಿ ಹರಿವಂಶ್, ಮಾಜಿ ಉಪ ರಾಷ್ಟ್ರಪತಿ ಜಗದೀಪ್ ಧನಕರ್, ಕೇಂದ್ರ ಸಚಿವರಾದ ಅಮಿತ್ ಶಾ, ಜೆಪಿ ನಡ್ಡಾ, ರಾಜನಾಥ್ ಸಿಂಗ್, ನಿತಿನ್ ಗಡ್ಕರಿ, ರಾಜ್ಯಸಭೆಯ ಪ್ರತಿಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ,ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸೇರಿದಂತೆ ಕೇಂದ್ರ ಸಚಿವರು ಸೇರಿದಂತೆ ಸಂಸದರು ಭಾಗಿಯಾಗಿದ್ದರು.

ಈ ವೇಳೆ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಕೇಂದ್ರ ಸಚಿವರು ನೂತನ ಉಪರಾಷ್ಟ್ರಪತಿ ಸಿಪಿ ರಾಧಾಕೃಷ್ಣನ್ ಅವರಿಗೆ ಅಭಿನಂದನೆ ಮತ್ತು ಶುಭಾಶಯ ಸಲ್ಲಿಸಿದರು.

ಆಡಳಿತಾರೂಢ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟದ ಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ಮೊನ್ನೆ ನಡೆದ ಚುನಾವಣೆಯಲ್ಲಿ ಭಾರತದ 15ನೇ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದರು. ಅವರು ತಮ್ಮ ಪ್ರತಿಸ್ಪರ್ಧಿ ಇಂಡಿಯಾ ಮೈತ್ರಿಕೂಟದ ಅಭ್ಯರ್ಥಿ ನ್ಯಾಯಮೂರ್ತಿ ಬಿ. ಸುದರ್ಶನ್ ರೆಡ್ಡಿ ವಿರುದ್ಧ 152 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದರು.

ಸಿಪಿ ರಾಧಾಕೃಷ್ಣನ್ ಅವರು 452 ಮೊದಲ ಪ್ರಾಶಸ್ತ್ಯ ಮತಗಳನ್ನು ಪಡೆದಿದ್ದರು , ನ್ಯಾಯಮೂರ್ತಿ ಸುದರ್ಶನ್ ರೆಡ್ಡಿ ಅವರು 300 ಮತಗಳನ್ನು ಪಡೆದು ಸೋಲು ಒಪ್ಪಿಕೊಂಡಿದ್ದರು.

767 ಸಂಸತ್ ಸದಸ್ಯರ ಪೈಕಿ ಶೇ. 98.2 ರಷ್ಟು ಮತದಾನದಲ್ಲಿ ಭಾಗವಹಿಸಿದ್ದರು. 14 ಸಂಸದರು ಮತ ಚಲಾಯಿಸಲಿಲ್ಲ ಚಲಾಯಿಸಲಾದ ಮತಗಳಲ್ಲಿ 752 ಮತಗಳು ಮಾನ್ಯವಾಗಿದ್ದರೆ, 15 ಮತಗಳು ಅಮಾನ್ಯವಾಗಿದ್ದವು.(2ನೇಪುಟಕ್ಕೆ)

## ನಾಳೆ ಜಾತಿ ಸಮೀಕ್ಷೆ ಕಾರ್ಯಾಗಾರ ಯಸ್ವಸಿಗೊಳಿಸಿ : ಅಮರೇಶ ಕಲ್ಲೂರು




**ಲಿಂಗಸುಗೂರು,ಸೆ.12–**ರಾಯಚೂರಿನ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿರುವ ಕೃಷಿ ವಿಜ್ಞಾನ ಕೇಂದ್ರ ಅಡಿಟೋರಿಯಂ ನಲ್ಲಿ ಸೆ.14 ಭಾನುವಾರ ಬೆಳಗ್ಗೆ 10 ಗಂಟೆ ಯಿಂದ ಸಂಜೆ 5.30ರ ವರೆಗೆ ಹಿಂದುಳಿದ ವರ್ಗಗಳ ಒಕ್ಕೂಟದ ಜನರಲ್ಲಿ ಜಾಗೃತಿ ಮೂಡಿಸಲು ಜಾಕಿ ಸಮೀಕ್ಷೆ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದ್ದು, ಇದನ್ನು ಯಶಸ್ವಿಗೊಳಿಸಬೇಕು ಎಂದು ತಾಲೂಕು ಹಿಂದುಳಿದ ವರ್ಗಗಳ ಒಕ್ಕೂಟದ ಖಜಾಂಚಿ ಅಮರೇಶ ಕಲ್ಲೂರು ಕರೆ ನೀಡಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯ ಸರಕಾರ ಹಮ್ಮಿಕೊಂಡಿರುವ ಸಾಮಾಜಿಕ, ಶೈಕ್ಷಣಿಕ ಜಾತಿ ಸಮೀಕ್ಷಾ ಕಾರ್ಯದಲ್ಲಿ ಕಣ್ಣೇರ್, ಯಾದವ್, ಮಡಿವಾಳ, ಉಪ್ಪಾರ, ಈಡಿಗ, ದಾಲುಮತ, ಹಡಪದ್ ಸೇರಿ 25 ಹಿಂದುಳಿದ ಜಾತಿಗಳ ಒಕ್ಕೂಟದ ಮುಖಂಡರುಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವ ಜೊತೆಗೆ ಸಮೀಕ್ಷೆಯಲ್ಲಿ ಹಿಂದುಳಿದವರು ಯಾರೂ ಕೈಬಿಟ್ಟು ಹೋಗದಂತೆ ಕ್ರಮಿಸಬೇಕು. ಸರಕಾರದ ಸವಲತ್ತುಗಳನ್ನು ಪಡೆಯುವಲ್ಲಿ ಅರ್ದರು ವಂಚಿತರಾಗಬಾರದು. ಎಂದರು.

ಕಾರ್ಯಾಗಾರದಲ್ಲಿ ಜಾತಿ ಸಮೀಕ್ಷೆ ಮಹತ್ವದ ಕುರಿತು ಲೇಖಕರಾದ ಎ.ನಾರಾಯಣ, ಕೋಷಿತ ಸಮುದಾ ಯಗಳು ಸಾಗಬೇಕಾದ ಹಾದಿ ಕುರಿತು ನಿವೃತ್ತ ಪ್ರಾಧ್ಯಾಪಕ ಕೆ.ಕೃಷ್ಣಪ್ಪ ಕರ್ನಾಟಕ ಸರ್ವ ಸಮುದಾಯಗಳ ಸಾಮಾಜಿಕ ನ್ಯಾಯ ಸಂರಕ್ಷಣ ಅಭಿಯಾನ ಕುರಿತು ಸಣ್ಣ ಬತ್ತಪ್ಪ ವಿಶೇಷ ಉಪನ್ಯಾಸ ನೀಡ(2ನೇಪುಟಕ್ಕೆ)

## ಅಲ್ಪಸಂಖ್ಯಾತರ ಯೋಜನೆಯ ಕಾರ್ಯಕ್ರಮಗಳನ್ನು ಸಮರ್ಪಕ ಅನುಷ್ಠಾನಗೊಳಿಸಿ: ನಿಸಾರ್ ಅಹಮದ್



ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.12–**ಅಲ್ಪಸಂಖ್ಯಾತರ ವರ್ಗಗಳ ಕಲ್ಯಾಣಕ್ಕಾಗಿ ರೂಪಿಸಲಾಗಿರುವ ಪ್ರಧಾನಮಂತ್ರಿಗಳ 15 ಅಂಶಗಳ ಕಾರ್ಯಕ್ರಮಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ನಿಗದಿತ ಅವಧಿಯೊಳಗೆ ಗುರಿ ಸಾಧಿಸಿಬೇಕೆಂದು ಅಲ್ಪಸಂಖ್ಯಾತ ಆಯೋಗದ ಅಧ್ಯಕ್ಷರಾದ ಯು.ನಿಸಾರ್ ಅಹಮದ್ ಅವರು ಹೇಳಿದರು.

ಶುಕ್ರವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪ್ರಧಾನ ಮಂತ್ರಿಗಳ 15 ಅಂಶಗಳ ಕಾರ್ಯಕ್ರಮದ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾರ್ಯಕ್ರಮದಡಿ ಅಲ್ಪಸಂಖ್ಯಾತರ ಸಮುದಾಯಕ್ಕೆ ಶಿಕ್ಷಣ, ಕೌಶಲ್ಯ ಹಾಗೂ ಇತರೆ ಉದ್ಯೋಗಗಳಿಗೆ ತರಬೇತಿ(2ನೇಪುಟಕ್ಕೆ)

## ರಾಯಚೂರು ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿ ತ್ವರಿತಗೊಳಿಸಲು ಸೂಚನೆ

ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.12–** ರಾಯಚೂರಿನ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿಯನ್ನು ತ್ವರಿತಗೊಳಿಸಿ, ಬೇಗನೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸೂಚನೆ ನೀಡಿದರು.

ಸೆಪ್ಟೆಂಬರ್ 11ರ ಸಂಜೆ ರಾಯಚೂರಿನಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿಯ ಉದ್ದೇಶಿತ ಸ್ಥಳವಾದ ಯರಮರಸ್ ಹೊರವಲಯದ ಪ್ರದೇಶಕ್ಕೆ ಭೇಟಿ ನೀಡಿ ಕಾಮಗಾರಿಯ ಪರಿವೀಕ್ಷಣೆ ನಡೆಸಿ ಅವರು ಮಾತನಾಡಿದರು.

ವಿಮಾನ ನಿಲ್ದಾಣ ಕಾಮಗಾರಿಯಲ್ಲಿ ಪ್ರಸ್ತಾಪಿಸಿರುವ ರನ್‌ವೇ, ಸಿಆರ್‌ಎಫ್ ಕಟ್ಟಡ, ಎಟಿಸಿ ಕಟ್ಟಡ ಮತ್ತು ಮಾಸ್ಟರ್ ಪ್ಲಾನ್‌ದಲ್ಲಿ ತೋರಿಸಿದ ಎಲ್ಲ ಕಾಮಗಾರಿಗಳು ನಿಗದಿಪಡಿಸಿದ ಕಾಲಮಿತಿಯೊಳಗೆ ಪೂರ್ಣವಾಗಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.



ಪ್ರಸ್ತುತ ವಿಮಾನ ನಿಲ್ದಾಣದ 2.5 ಕಿ ಮೀ ಉದ್ದದ ರನ್ ವೆ ಕಾಮಗಾರಿ ಪೂರ್ಣವಾಗಿದ್ದು, ಈದೀಗ ಮರ್ಮ ಹಾಕಲಾಗುತ್ತದೆ. ನಿಲ್ದಾಣದ ಕಾಂಪೌಂಡ್ ವಾಲ್ ಕಾಮಗಾರಿ ಶೇ.70ರಷ್ಟು ಪೂರ್ಣವಾಗಿದೆ.

ಪ್ಯಾಸೆಂಜರ್ ಟರ್ಮಿನಲ್ ಕಟ್ಟಡಕ್ಕೆ ಬುನಾದಿ ಫೂಟಿಂಗ್ ಹಾಕುವ ಕಾಮಗಾರಿ ಪೂರ್ಣವಾಗಿದೆ. ಸಿಎಫ್ ಆರ್ ಕಟ್ಟಡಕ್ಕೆ ಪುಟ್ಟಿಂಗ್ ಹಾಕುವ ಕಾಮಗಾರಿ ಸಹ ಪೂರ್ಣವಾಗಿದೆ. ಇಎಸ್ ಎಸ್ ಪುಟ್ಟಿಂಗ್ ಹಾಕುವ ಕಾಮಗಾರಿ (2ನೇಪುಟಕ್ಕೆ)

## ಪೈದೊಡ್ಡಿ : ಬಂಡಿ ದಾರಿ ಬಂದ್ ಕ್ರಮಕ್ಕೆ ಕರವೇ ಒತ್ತಾಯ




ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಸೆ.12–** ತಾಲೂಕಿನ ಪೈದೊಡ್ಡಿ ಗ್ರಾಮದ ವ್ಯಾಪ್ತಿಯಲ್ಲಿನ ಜಮೀನುಗಳಿಗೆ ತೆರಳಲು ಇರುವ ಬಂಡಿದಾರಿಯನ್ನು ತಿಮ್ಮಪ್ಪ ಎನ್ನುವವರು ಬಂದ್ ಮಾಡಿದ್ದು, ಕೂಡಲೇ ತೆರವುಗೊಳಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಬಿಮಾನಿ ಬಣದ ನೇತೃತ್ವದಲ್ಲಿ ರೈತರು ಸಹಾಯಕ ಆಯುಕ್ತ ಬಸವಣ್ಣೆಪ್ಪ ಕಲಶೆಟ್ಟಿಯವರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಪೈದೊಡ್ಡಿಯ ಸರ್ವೆ ನಂ.49 ಹಿಸ್ಸಾ 2/3 ಮಾಲೀಕ ತಿಮ್ಮಪ್ಪ ಎನ್ನುವವರು ತಮ್ಮ ಹೊಲದಲ್ಲಿ ಅನಾದಿ ಕಾಲದಿಂದಲೂ ಇರುವ ಬಂಡಿ ದಾರಿಯನ್ನು ಬಂದ್ ಮಾಡಿದ್ದಾರೆ. ಈ ರಸ್ತೆಯಿಂದ ಸುಮಾರು 100 ಎಕರೆ ಜಮೀನಿಗೆ ಮಾರ್ಗವಿದ್ದು, ರೈತರಿಗೆ ತೀವ್ರ ತೊಂದರೆಯಾಗುತ್ತಿದೆ. ಸರಕಾರಿ ದಾಖಲೆ ಹಾಗೂ ಕಂದಾಯ ನಕ್ಷೆಯ ಪ್ರಕಾರ ಈ ಜಮೀನಿನಲ್ಲಿ ಬಂಡಿ ದಾರಿ ಇದೆ. ಇದರ ಮೂಲಕವೇ ಪೈದೊಡ್ಡಿ. ಗೋಲಪಲ್ಲಿ ಸೀಮೆಯ ಜಮೀನುಗಳಿಗೆ ರೈತರು ಹೋಗುತ್ತಾರೆ. ಅನಾದಿ ಕಾಲದಿಂದಲೂ ಈ ರಸ್ತೆಯಲ್ಲೇ ಓಡಾಟವಿದೆ. ಇದು ನನ್ನ ಜಮೀನು ನಾನು ನಿಮಗೆ ದಾರಿ ಬಿಡುವುದಿಲ್ಲ. ಯಾರಾದರೂ ಬಂದರೆ ಪರಿಣಾಮ ನೆಟ್ಟಗಿರುವುದಿಲ್ಲ ಎಂದು ತಿಮ್ಮಪ್ಪ ಬೆದರಿಕೆ ಹಾಕುತ್ತಾನೆ. ಪರಿಣಾಮ ಹೊಲಗಳಿಗೆ ಹೋಗದಂಥದ ಪರಿಸ್ಥಿತಿ ನಿರ್ಮಾಣವಾಗಿದೆ. ಕೂಡಲೇ ಪರಿಶೀಲನೆ ಮಾಡಿ ರೈತರಿಗೆ ಓಡಾಡಲು ದಾರಿಯನ್ನು ಬಿಡಿಸಿಕೊಡಬೇಕು. ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಸಂಘಟನೆ ಅಧ್ಯಕ್ಷ ಜಿಲಾನಿಪಾಷಾ, ರೈತರಾದ ದುರುಗಪ್ಪ ಸು ರಪುರ, ತಿಮ್ಮಯ್ಯ ಸುರಪುರ, ಭೀಮಣ್ಣ ಮ್ಯಾಕಲದೊಡ್ಡಿ, ಶರಣಬಸವ, ಗೋಪಾಲ, ಶಿವಣ್ಣ, ಬಸಯ್ಯ ಸೇರಿದಂತೆ ಇತರರು ಇದ್ದರು.

## ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ವತಿಯಿಂದ ಬಾಲ್ಯ ವಿವಾಹ ವಿರೋಧಿ ಜಾಗೃತಿ ಜಾಥ

ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.12–** ಬಾಲ್ಯ ವಿವಾಹದ ವಿರುದ್ಧ ಜನಜಾಗೃತಿ ಮೂಡಿಸುವ ಉದ್ದೇಶದಿಂದ ಮಾನ್ವಿಯಲ್ಲಿ ತಾಲೂಕು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ವತಿಯಿಂದ ಬೃಹತ್ ಜಾಗೃತಿ ಜಾಥ ನಡೆಯಿತು. ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಚೌಡೇಶ್ವರಿ ದೇವಸ್ಥಾನದ ಆವರಣದಲ್ಲಿ ಜಾಥಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಗಳು, ಭಾರತೀಯ ಸಂಸ್ಕೃತಿಯಲ್ಲಿ ಮಹಿಳೆಯರಿಗೆ ಉನ್ನತ ಸ್ಥಾನವಿದೆ. ದಸರಾ ಹಬ್ಬದ ಸಂದರ್ಭದಲ್ಲಿ ನವರಾತ್ರಿ ಆಚರಣೆಯ ಮೂಲಕ ಮಹಿಳೆಯರನ್ನು ದೇವಿಯ ರೂಪದಲ್ಲಿ ಪೂಜಿಸಲಾಗುತ್ತದೆ ಎಂದು ಹೇಳಿದರು. ಈ ಬಾರಿ ಕಲ್ಮಠದಲ್ಲಿ ನಡೆಯುತ್ತಿರುವ 50ನೇ ವರ್ಷದ ದಸರಾ ಮಹೋತ್ಸವದಲ್ಲಿ 9 ಮಹಿಳಾ ಸಾಧಕರಿಗೆ ಸನ್ಮಾನ ಮತ್ತು ರಾಜ್ಯದ ಹೆಸರಾಂತ ಮಹಿಳಾ ಸಾಧಕಿಯರಿಂದ ವಿಶೇಷ ಉಪನ್ಯಾಸ ಕಾರ್ಯಕ್ರಮಗಳನ್ನು ಆಯೋಜಿ ಸಲಾಗಿದೆ ಎಂದು ತಿಳಿಸಿದರು. ತಾಲೂಕಿನ ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಅವರು ಕೋರಿದರು.




ತಾಲೂಕು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷರಾದ ಹೆಚ್.ಶರ್ಫುದ್ದೀನ್ ಪೋತ್ನಾಳ್ ಮಾತನಾಡಿ, ಸರ್ಕಾ ರವು ಹೆಣ್ಣುಮಕ್ಕಳ ಉತ್ತಮ ಭವಿಷ್ಯಕ್ಕಾಗಿ ವಿವಾಹದ ವಯಸ್ಸನ್ನು ಹೆಣ್ಣಿಗೆ 18 ವರ್ಷ ಮತ್ತು ಗಂಡಿಗೆ 21 ವರ್ಷ ಎಂದು ನಿಗದಿಪಡಿಸಿದೆ. ಈ ವಯಸ್ಸಿನ ಮೊದಲೇ ಮದುವೆ ಮಾಡುವುದು ಕಾನೂನು ಪ್ರಕಾರ ಅಪರಾಧವಾಗಿದೆ. ಆದ್ದರಿಂದ ಪೋಷಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ, ಉನ್ನತ ಜೀವನ ರೂಪಿಸಿಕೊಳ್ಳಲು ಅವಕಾಶ ಮಾಡಿಕೊಡಬೇಕು ಎಂದು ತಿಳಿಸಿದರು. ಚೌಡೇಶ್ವರಿ ದೇವಸ್ಥಾನದಿಂದ ಪ್ರಾರಂಭವಾದ ಜಾಥ ಪ್ರಮುಖ ವೃತ್ತಗಳ ಮೂಲಕ ಹಾದು ಹೋಗಿ ಟಿ.ಎ.ಪಿ.ಎಂ.ಸಿ. ಬಯಲು ಜಾಗದಲ್ಲಿ ಸಮಾಪ್ತಗೊಂಡಿತು. ಈ ವೇಳೆ, ವಿದ್ಯಾರ್ಥಿಗಳು ಬಾಲ್ಯ ವಿವಾಹ ವಿರೋಧಿ ಘೋಷಣೆಗಳನ್ನು ಕೂಗುವ ಮೂಲಕ ಜನರಲ್ಲಿ ಜಾಗೃತಿ ಮೂಡಿಸಿದರು.

ಕಾರ್ಯಕ್ರಮದಲ್ಲಿ ಬಿ.ವಿ.ಆರ್.ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಬಿ.ವಿ. ರೆಡ್ಡಿ, ನೇತಾಜಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಕೆ.ಇ. ನರಸಿಂಹ, ಕಲ್ಮಠ ಕಾಲೇಜಿನ ಪ್ರಾಚಾರ್ಯರಾದ ಸಿದ್ದನಗೌಡ, ಕಲ್ಮಠ ಪಿ.ಯು. ಕಾಲೇಜ್ ಪ್ರಾಚಾರ್ಯರಾದ ಎಸ್.ಎಸ್. ಪಾಟೀಲ್, ಸರ್ವೋದಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಮನೋಜ್ ಕುಮಾರ್ ಮಿಶ್ರಾ, ಕಾರ್ಯದರ್ಶಿ ಅನಿಲ್ ಕುಮಾರ್ ಎಚ್,ಉಪನ್ಯಾಸಕರಾದ ರಮೇ ಶಬಾಬುಯಾಳಗಿ, ಡಾ. ಜೀವನೇಶ್ವರಯ್ಯ ಮುಖೀಮ್ ಹಾಗೂ ವಿವಿಧ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಮೊದಲನೇಯ ಪುಟದಿಂದ

# ಉಪರಾಷ್ಟ್ರಪತಿಯಾಗಿ ರಾಧಾಕೃಷ್ಣನ್ ಪದಗ್ರಹಣ

**ಹೆಚ್ಚುವರಿ ಜವಾಬ್ದಾರಿ**–ಮಹರಾಷ್ಟ್ರದ ರಾಜ್ಯಪಾಲರಾಗಿದ್ದ ಸಿಪಿ ರಾಧಾಕೃಷ್ಣನ್ ಅವರು ಉಪರಾಷ್ಟ್ರಪತಿ ಆಗಿ ಪ್ರಮಾಣ ವಚನ ಸ್ವೀಕಾರ ಮಾಡಿದ ಹಿನ್ನೆಲೆಯಲ್ಲಿ ಅವರಿಂದ ತೆರವಾಗಿರುವ ಮಹಾರಾಷ್ಟ್ರ ರಾಜ್ಯಪಾಲರ ಜವಾಬ್ದಾರಿಯನ್ನು ಗುಜ ರಾತ್ ರಾಜ್ಯಪಾಲರಾಗಿರುವ ಆಚಾರ್ಯ ದೇವವ್ರತ್ ಅವರಿಗೆ ಮಹಾರಾಷ್ಟ್ರದ ಮೇಲ್ವಿಚಾರಣೆಯ

ಹೆಚ್ಚುವರಿ ಜವಾಬ್ದಾರಿ ವಹಿಸಲಾಗಿದೆ. ಆಚಾರ್ಯ ದೇವವ್ರತ್ ಅವರನ್ನು ತಮ್ಮದೇ ಆದ ಕರ್ತವ್ಯಗಳ ಜೊತೆಗೆ ಮಹಾರಾಷ್ಟ್ರದ ರಾಜ್ಯಪಾಲರ ಕಾರ್ಯಗಳನ್ನು ನಿರ್ವಹಿಸಲು ನೇಮಿಸಿದ್ದಾರೆ" ಎಂದು ರಾಷ್ಟ್ರಪತಿ ಭವನದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಕಳೆದ ಜುಲೈ 21 ರಂದು, ಜಗದೀಪ್ ಧನ್ಕರ್ ರಂದು ಉಪ ರಾಷ್ಟ್ರಪತಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು.ಜಗದೀಪ್ ಧನಕರ್ ಅವಧಿ 2027. ರ ಅಕ್ಟೋಬರ್ 10/ ರ ತನಕ ಇತ್ತು

**ಮೋದಿ ಅಭಿನಂಧನೆ**–ಉಪರಾಷ್ಟ್ರಪತಿ ಸಿಪಿ ರಾಧಾಕೃಷ್ಣನ್ ಅವರಿಗೆ ಅಭಿನಂದನೆಗಳು. ಜೀವನ ಯಾವಾಗಲೂ ಸಮಾಜಕ್ಕೆ ಸೇವೆ ಸಲ್ಲಿಸಲು ಮತ್ತು ಬಡವರು ಮತ್ತು ಅಂಚಿನಲ್ಲಿರುವವರ ಸಬಲೀಕರಣಕ್ಕೆ ಮೀಸಲಾಗಿರಲಿ ಎಂದು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ಸಾಂವಿಧಾನಿಕ ಮೌಲ್ಯಗಳನ್ನು ಬಲಪಡಿಸುವ ಮತ್ತು ಸಂಸದೀಯ ಸಂವಾದವನ್ನು ಹೆಚ್ಚಿಸುವ ಅತ್ಯುತ್ತಮ ಉಪ ರಾಷ್ಟ್ರಪತಿ ಆಗುವ ವಿಶ್ವಾಸವಿದೆ ಎಂದು ಹೇಳಿದ್ದಾರೆ.

# ನಾಳೆ ಜಾತಿ ಸಮೀಕ್ಷೆ ಕಾರ್ಯಾಗಾರ ಯಸ್ವಸಿಗೊಳಿಸಿ : ಅಮರೇಶ ಕಲ್ಲೂರು

ಲಿದ್ದಾರೆ. ನಿವೃತ್ತ ಮುಖ್ಯ ಕಾರ್ಯದರ್ಶಿ ಅಶೀಕ್‌ಸಾಬ, ಸಂಸದ ಕುಮಾರ ನಾಯಕ, ಒಕ್ಕೂಟದ ಜಿಲ್ಲಾಧ್ಯಕ್ಷ ಕೆ.ಶಾಂತಪ್ಪ ಸೇರಿ ಗಣ್ಯರು ಪಾಲ್ಗೊಳ್ಳಲಿದ್ದಾರೆ. ಹಿಂದುಳಿದ ಸಮುದಾಯದ ಬಂಧುಗಳು ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ತೆರಳಬೇಕು ಎಂದು ಒಕ್ಕೂಟ ಖಜಾಂಚಿ ಅಮರೇಶ ಕಲ್ಲೂರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪರಮೇಶ ಯಾದವ್, ನರಸಿಂಹ ಕೊಡ್ಲಿ, ವೆಂಕೋಬ ಪವಡಿ, ಮಲ್ಲಿಕಾರ್ಜುನ ಕ್ಯಾಮ, ವೀರಭದ್ರಪ್ಪ ಗುತ್ತೇದಾರ, ವಿನೋದ ಟಂಕಸಾಲಿ, ಚಿದಾನಂದ ಹಡಪದ ಸೇರಿದಂತೆ ಇದ್ದರು

# ರಾಯಚೂರು ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿ ತ್ವರಿತಗೊಳಿಸಲು ಸೂಚನೆ

ಶೇ.90ರಷ್ಟು ಪೂರ್ಣವಾಗಿದೆ ಎಂದು ಇದೆ ವೇಳೆ ಅಧಿಕಾರಿಗಳು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬೀನ್ ಮೊಹೊಪಾತ್ರ, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ವೆಂಕಟೇಶ ಗಳಗ, ಸಹಾಯಕ ಕಾರ್ಯಪಾಲಕ ಅಭಿಯಂತರಾದ ಮಹೇಶಕುಮಾರ, ವಿಮಾನ ನಿಲ್ದಾಣದ ಎಂಜಿನಿಯರ್ ಪ್ರವೀಣ್ ಹಾಗೂ ಸಂಬಂಧಿಸಿದ ಗುತ್ತಿಗೆದಾರರ ಎಂಜಿನಿಯರು ಇದ್ದರು.

# ಅಲ್ಪಸಂಖ್ಯಾತರ ಯೋಜನೆಯ ಕಾರ್ಯಕ್ರಮಗಳನ್ನು ಸಮರ್ಪಕ ಅನುಷ್ಠಾನಗೊಳಿಸಿ: ನಿಸಾರ್ ಅಹಮದ್

ನೀಡಲು ಹೆಚ್ಚಿನ ಆದ್ಯತೆ ನೀಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಕ್ಕೆ ಬಂದಂತಹ ಅರ್ಜಿಗಳನ್ನು ನಿಗದಿತ ಸಮಯದಲ್ಲಿ ವಿಲೇವಾರಿ ಮಾಡಬೇಕು. ಕಾಲಕಾಲಕ್ಕೆ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು. ವಿವಿಧ ಯೋಜನೆಯಡಿ ಅಲ್ಪಸಂಖ್ಯಾತರಿಗೆ ಸಾಲ ಸೌಲಭ್ಯ ಒದಗಿಸಬೇಕೆಂದರು.

ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಶೈಕ್ಷಣಿಕ ಅವಕಾಶ ಹೆಚ್ಚಳ, ಆರ್ಥಿಕ ಚಟುವಟಿಕೆ, ಜೀವನ ಮಟ್ಟ ಸುಧಾರಿಸಲು ವಿಶೇಷ ಕಾಳಜಿ ವಹಿಸಬೇಕು. ಮಹಿಳಾ ಮತ್ತು ಮಕ್ಕಳ ಅಭಿವದ್ಧಿ ಇಲಾಖೆಯಿಂದ ಅಂಗನವಾಡಿ ಕೇಂದ್ರಗಳ ಮೂಲಕ ಪೌಷ್ಠಿಕ ಆಹಾರ ಪೂರೈಕೆ, ಆರೋಗ್ಯ ಸೇವೆ, ಶಾಲಾ ಪೂರ್ವ ಅನೌಪಚಾರಿಕ ಶಿಕ್ಷಣ ಮತ್ತಿತರ ಸೇವೆಗಳನ್ನು ಅವಕಾಶ ವಂಚಿತ ಅಲ್ಪಸಂಖ್ಯಾತರ ಸಮುದಾಯಕ್ಕೆ ಒದಗಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಾರ್ವಜನಿಕ ಶಿಕ್ಷಣ ಇಲಾಖೆ ಮೂಲಕ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ, ಸಮವಸ್ತ್ರ, ಬೈಸಿಕಲ್, ವಿದ್ಯಾರ್ಥಿ ವೇತನ ಮತ್ತಿತರ ಸೌಲಭ್ಯ, ಎಸ್.ಎಸ್.ಎಲ್.ಸಿ., ಪಿ.ಯು.ಸಿ., ಪದವಿಗಳಲ್ಲಿ ಹೆಚ್ಚು ಅಂಕಗಳಿಸಿದ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಸೇರಿದಂತೆ ಇತರೆ ಯೋಜನೆಯ ಕುರಿತು ಮಾಹಿತಿ ತಲುಪಿಸಬೇಕೆಂದರು.

ಅಲ್ಪಸಂಖ್ಯಾತರ ಶೈಕ್ಷಣಿಕ ಅವಕಾಶಗಳನ್ನು ಹೆಚ್ಚಿಸಬೇಕು. ಉರ್ದು ಶಿಕ್ಷಣಕ್ಕೆ ಹೆಚ್ಚಿನ ಸಂಪನ್ಮೂಲ ಒದಗಿಸುವುದು ಹಾಗೂ ಶಿಕ್ಷಣ ಸೌಲಭ್ಯಗಳನ್ನು ಕಲ್ಪಿಸುವುದು ಮುಖ್ಯವಾಗಿದೆ. ತಂತ್ರಜ್ಞಾನ ತರಬೇತಿ ಮೂಲಕ ಕೌಶಲ್ಯ ಕಾರ್ಯಕ್ರಮಗಳನ್ನು ತಲುಪಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬೀನ್ ಮೊಹಪಾತ್ರ, ಅಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿ ಮುಜಿಬಲ್, ಡಿವೈಎಸ್ಪಿ ಶಾಂತಮೂರ್ತಿ, ನಿವೃತ್ತ ಎಎಸ್ಪಿ ಅಬ್ದುಲ್ ಖಾದರ್, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರವೀಣ್ ಕುಮಾರ್, ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ, ಸಿಡಾಕ್ ಜಂಟಿ ನಿರ್ದೇಶಕರಾದ ಜಿ.ಯು.ಹುಡೇದ್, ಜಿಲ್ಲಾ ಉದ್ಯೋಗಾಧಿಕಾರಿ ನವೀನ್ ಕುಮಾರ್ ಸಂಗೇಪಾಲ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನವೀನ ಕುಮಾರ್ ಸೇರಿದಂತೆ ಇತರರು ಇದ್ದರು.

# ನ್ಯಾಯಾಧೀಶ ಹೆಚ್.ಎ.ಸಾತ್ವಿಕ್ ಅವರಿಂದ ಬಿತ್ತಿ ಪತ್ರಗಳ ಬಿಡುಗಡೆ




ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.12**–ಇಲ್ಲಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ, 2024–25ನೇ ಸಾಲಿನಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಮತ್ತು ಮಾಜಿ ದೇವದಾಸಿ ಮಹಿಳೆಯರ ಸಮೀಕ್ಷೆಯು ಸೆ.15 ರಂದು ಪ್ರಾರಂಭವಾಗುವ ಹಿನ್ನಲೆಯಲ್ಲಿ ಗುರುವಾರ ನಗರದ ಜಿಲ್ಲಾ ನ್ಯಾಲಯಾಲಯದ ಆವರಣದಲ್ಲಿ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ಬಿತ್ತಿ ಪತ್ರಗಳನ್ನು ಬಿಡುಗಡೆ ಮಾಡಿದರು.

ಇದೇ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರಾದ ನವೀನ್ ಕುಮಾರ್, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ರಾಯಚೂರು ಅಭಿವೃದ್ಧಿ ಅಧಿಕಾರಿ ಚಾಮರಾಜ, ದೇವದಾಸಿ ಪುನರ್ವಸತಿ ಯೋಜನೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ನಾಗರಾಜ, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೆಂಕಟೇಶ ಇದ್ದರು.

### ಒಕ್ಕೂಟದ ಅಧ್ಯಕ್ಷರಾಗಿ ಎರಡನೇ ಅವಧಿಗೆ ಅವಿರೋಧವಾಗಿ ಆಯ್ಕೆಯಾದ ಶರಣಗೌಡ ಸುಂಕೇಶ್ವರಹಾಳ

# ಸಂಘಟನೆಯಿಂದ ಹಿಂದುಳಿದ ಸಮಾಜಗಳು ಅಭಿವೃದ್ಧಿ ಹೊಂದಬೇಕು : ಜಿಲ್ಲಾಧ್ಯಕ್ಷ ಕೆ.ಶಾಂತಪ್ಪ



ಯುವ ಮಾರ್ಗ ಸುದ್ದಿ

**ದೇವದುರ್ಗ,ಸೆ.12**–ಸಂಘಟನೆಯಿಂದ ವಿವಿಧ ಹಿಂದುಳಿದ ಸಮಾಜಗಳು ಅಭಿವೃದ್ಧಿ ಹೊಂದಲು ಸಾಧ್ಯವೆಂದು ಜಿಲ್ಲಾ ಹಿಂದು ಳಿದ ಜಾತಿಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಕೆ.ಶಾಂತಪ್ಪ ಅವರು ಹೇಳಿದರು.

ಅವರು ಬುಧುವಾರ ದೇವದುರ್ಗ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಆಯೋಜಿಸಿದ್ದ ದೇವದುರ್ಗ ತಾಲೂಕ ಹಿಂದುಳಿದ ಜಾತಿಗಳ ಒಕ್ಕೂಟ ಪುನರ್ ರಚನೆ ಮತ್ತು ಪದಾಧಿಕಾರಿಗಳ ನೇಮಕ ಸಭೆಯಲ್ಲಿ ಭಾಗವಹಿಸಿ ಮಾತನಾಡಿ, ರಾಜ್ಯದಲ್ಲಿ ಹಲವಾರು ಹಿಂದುಳಿದ ಜಾತಿಗಳು ಸಂಘಟನೆ ಕೊರತೆಯಿಂದ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ರಾಜಕೀಯವಾಗಿ ಹಿಂದುಳಿದಿದ್ದು, ಜಿಲ್ಲೆಯಲ್ಲಿ ಹಿಂದುಳಿದ ಜಾತಿಗಳು ಅಭಿವೃದ್ಧಿ ಹೊಂದಲು ಸಂಘಟನೆ ಅನಿವಾರ್ಯವಾಗಿದೆ. ಜಿಲ್ಲೆಯಲ್ಲಿ ಈಗಾಗಲೇ ಕಳೆದ ಆರು ವರ್ಷಗಳಿಂದ ಸಂಘಟನೆಯನ್ನು ಬಲಪಡಿಸಲಾಗಿದ್ದು. ಎಲ್ಲ ತಾಲೂಕಿನಲ್ಲಿ ಒಕ್ಕೂಟಗಳನ್ನು ರಚನೆ ಮಾಡಲಾಗಿದೆ. ಎಲ್ಲ ಹಿಂದುಳಿದ ಜಾತಿಗಳ ಒಕ್ಕೂಟ ರಚನೆಯಿಂದ ನಮ್ಮ ಮೂಲಭೂತ ಹಕ್ಕುಗಳನ್ನು ಪಡೆಯಬಹುದು ಎಂದು ಹೇಳಿದರು. ಮುಂದಿನ ತಿಂಗಳು ಹಿಂದುಳಿದ ವರ್ಗಗಳ ಆಯೋಗದಿಂದ ಜಾತಿ ಸಮೀಕ್ಷೆಯು ಪ್ರಾರಂಭವಾಗುತ್ತಿದ್ದು. ತಮ್ಮ ಜಾತಿಯ ನಿಖರ ಮಾಹಿತಿಯನ್ನು ನೀಡಬೇಕು. ಇದೇ ತಿಂಗಳು 14 ರಂದು ನುರಿತ ತಜ್ಞರಿಂದ ಹಿಂದುಳಿದ ವರ್ಗಗಳ ಬಗ್ಗೆ ರಾಯಚೂರಿನಲ್ಲಿ ಕಾರ್ಯಗಾರ ಹಮ್ಮಿಕೊಳ್ಳಲಾಗಿದೆ. ಎಲ್ಲ ತಾಲೂಕಿನ ಹಿಂದುಳಿದ ವರ್ಗಗಳ ಸಮಾಜದ ಜನರು ಭಾಗವಹಿಸಬೇಕು ಎಂದು ಹೇಳಿದರು.

ಬಳಿಕ ತಾಲೂಕಿನ ಹಿಂದುಳಿದ ಜಾತಿಗಳ ಎಲ್ಲ ಅಧ್ಯಕ್ಷರುಗಳ ಹಾಗೂ ಪದಾಧಿಕಾರಿಗಳ ಒಮ್ಮತ ಮೇರೆಗೆ ದೇವದುರ್ಗ ತಾಲೂಕ ಹಿಂದುಳಿದ ಜಾತಿಗಳ ಒಕ್ಕೂಟದ ಅಧ್ಯಕ್ಷರನ್ನಾಗಿ ಎರಡನೇ ಬಾರಿಗೆ ಅವಿರೋಧವಾಗಿ ಶರಣಗೌಡ ಸುಂಕೇಶ್ವರಹಾಳ ಅವರನ್ನು ನೇಮಕ ಮಾಡಲಾಗಿದೆ ಎಂದು ಘೋಷಣೆ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಹಿಂದುಳಿದ ಜಾತಿಗಳ ಒಕ್ಕೂಟದ ಜಿಲ್ಲಾ ಗೌರವಧ್ಯಕ್ಷ ಖಾಜನಗೌಡ ಏಗನೂರು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹನುಮಂತಪ್ಪ ಯಾದವ್, ಶ್ರೀಕಾಂತ್ ವಕೀಲರು, ಜಿಲ್ಲಾ ಕಾರ್ಯದರ್ಶಿ ವಿಜಯ ಬಾಸ್ಕರ್ ಇಟಗಿ, ಶರಣಪ್ಪ ಕಡಗೋಳು, ಜಿಲ್ಲಾ ಖಜಾಂಚಿ ಜಂಭಣ್ಣ ಯಕ್ಷಸಪೂರು, ದಾನಪ್ಪ ಯಾದವ್, ಜಂಬಣ್ಣ ನಿಲೋಗಲ್, ತಾಲೂಕಿನ ಹಿಂದುಳಿದ ವರ್ಗಗಳ ವಿಶ್ವಕರ್ಮ ಸಮಾಜದ ಅಧ್ಯಕ್ಷರಾದ ರಮೇಶ ಪತ್ತಾರ, ಹಾಲುಮತ ಸಮಾಜದ ಅಧ್ಯಕ್ಷರಾದ ನಾಗರಾಜ ಖಾನಪೂರು, ಗಂಗಾಮತ ಸಮಾಜದ ಅಧ್ಯಕ್ಷರಾದ ಸಾಬಣ್ಣ ಗೂಗಲ್, ಹೂಗಾರ ಸಮಾಜದ ಅಧ್ಯಕ್ಷರಾದ ಶಂಕರ ಹೂಗಾರ, ಮಡಿವಾಳ ಸಮಾಜದ ಅಧ್ಯಕ್ಷರಾದ ಬಸವರಾಜ ಮಡಿವಾಳ, ಬೈಲ್ ಪತ್ತಾರ ಸಮಾಜದ ಅಧ್ಯಕ್ಷರಾದ ನಾಗರಾಜ ಪತ್ತಾರ, ಈಡಿಗ ಸಮಾಜದ ಅಧ್ಯಕ್ಷರಾದ ರಂಗನಾಥ ಅಬಕಾರಿ, ಗೌಳಿ ಸಮಾಜದ ಅಧ್ಯಕ್ಷರಾದ ಅಂಬಾಜಿ ತಾಳಿಪೇಟ್, ಸವಿತಾ ಸಮಾಜದ ಅಧ್ಯಕ್ಷರಾದ ಗೂಳಪ್ಪ ಹೇಮನೂರು, ಚಿತ್ರಗಾರ ಸಮಾಜದ ಅಧ್ಯಕ್ಷರಾದ ಸಿ.ತಾಯಣ್ಣ ದೇವದುರ್ಗ, ಪಿಂಜಾರ ಸಮಾಜದ ಅಧ್ಯಕ್ಷರಾದ ಖಾಸೀಂಸಾಬು, ಹಡಪದ ಸಮಾಜದ ಪ್ರಭು ಮಸರ ಕಲ್, ಪದ್ಮಶಾಲಿ ಸಮಾಜದ ಅಧ್ಯಕ್ಷರಾದ ಕರಿಯಪ್ಪ, ದೇವಾಂಗ ಸಮಾಜದ ಭೋಜರಾಜ ಮಿಣಜಿಗಿ ಇದ್ದರು.

# ಪಿಯುಸಿ ಫಲಿತಾಂಶ ಸುಧಾರಣೆಗೆ ಪುನಶ್ಚೇತನ ಶಿಬಿರ ಶ್ಲಾಘನೀಯ: ಶಶೀಲ್ ನಮೋಶಿ

**ಕಲಬುರಗಿ,ಸೆ.12**– ಕಲ್ಯಾಣ ಕರ್ನಾಟಕದ ಭಾಗದಲ್ಲಿ ಪಿಯುಸಿ ದ್ವಿತೀಯ ವರ್ಷದ ಫಲಿತಾಂಶ ಸುಧಾರಣೆಗಾಗಿ ಶಾಲಾ ಶಿಕ್ಷಣ ಇಲಾಖೆ ಪದವಿಪೂರ್ವ ವಿಭಾಗ ಹಾಗೂ ಉಪನ್ಯಾಸಕರ ಹಾಗೂ ಪ್ರಾಚಾರ್ಯರ ಸಂಘಗಳು ಕಾರ್ಯ ನಿರ್ವಹಿಸುತ್ತಿರುವದು ಶ್ಲಾಘನೀಯ ಎಂದು ವಿಧಾನ ಪರಿಷತ್ ಸದಸ್ಯ ಶಶೀಲ್ ನಮೋಶಿ ಹೇಳಿದರು.

ಅವರು ಹೈ.ಕ ಶಿಕ್ಷಣ ಸಂಸ್ಥೆಯ ಶ್ರೀಮತಿ ವೀರಮ್ಮ ಗಂಗಸೀರಿ ಮಹಿಳಾ ಪದವಿ ಪೂರ್ವ ಕಾಲೇಜಿನಲ್ಲಿ ಶಾಲಾ ಶಿಕ್ಷಣ ಇಲಾಖೆ ಪದವಿಪೂರ್ವ ವಿಭಾಗ, ಕರ್ನಾಟಕ ರಾಜ್ಯ ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರ ಸಂಘ , ಉಪನ್ಯಾಸಕರ ಸಂಘ ಕಲಬುರ್ಗಿ ಶಾಖೆಯ ಸಹಯೋಗದಲ್ಲಿ ಜರುಗಿದ ರಸಾಯನಶಾಸ್ತ್ರ, ಗಣಿತ ಶಾಸ್ತ್ರ ಹಾಗೂ ರಾಜ್ಯ ಶಾಸ್ತ್ರ ವಿಷಯಗಳ ಉಪನ್ಯಾಸಕರಿಗೆ ಫಲಿತಾಂಶ ಸುಧಾರಣೆಗಾಗಿ ಪುನಶ್ಚೇತನ ತರಬೇತಿ ಶಿಬಿರ ಉದ್ಘಾಟಿಸಿ ಮಾತನಾಡುತ್ತಿದ್ದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಫಲಿತಾಂಶ ಕುಸಿಯುತ್ತಿರುವದಕ್ಕೆ ಉಪನ್ಯಾಸಕರು ಕಾರಣರಲ್ಲ ಈ ಭಾಗದಲ್ಲಿ ಪೂರ್ಣ ಪ್ರಮಾಣದ ಶಿಕ್ಷಕರ, ಉಪನ್ಯಾಸಕರ ನೇಮಕಾತಿ ಇಲ್ಲದೆ ಇರುವುದು ಕಾರಣವಾಗಿದೆ.ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ ಎಲ್ಲ ಹುದ್ದೆಗಳನ್ನು ನೇಮಕಾತಿಗೆ ಸರ್ಕಾರ ಕ್ರಮ ವಹಿಸಲು ಈಗಾಗಲೇ ಹಲವಾರು ಬಾರಿ ಒತ್ತಡ ಹೇರಲಾಗಿದೆ, ಬಡ್ತಿ ಮೂಲಕವು ನೇಮಕಾತಿ ಮಾಡಿಕೊಳ್ಳಲು ಒತ್ತಾಯಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲಾ ಶಿಕ್ಷಣ ಇಲಾಖೆ ಪದವಿ ಪೂರ್ವ ವಿಭಾಗ ಕಲಬುರ್ಗಿಯ ಉಪನಿರ್ದೇಶಕ

ಸುರೇಶ್ ಅಕ್ಕಣ್ಣ ವಹಿಸಿದ್ದರು. ಪದವಿಪೂರ್ವ ಕಾಲೇಜಿನ ಕಲಬುರ್ಗಿ ವಿಭಾಗದ ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿಡಾ ಚಂದ್ರಶೇಖರ ದೊಡಮನಿ, ಕರ್ನಾಟಕ ರಾಜ್ಯ ಪದವಿಪೂರ್ವ ಕಾಲೇಜು ಪ್ರಾಚಾರ್ಯರ ಸಂಘದ ಅಧ್ಯಕ್ಷ ಬಸವರಾಜ ಬಿರಾದಾರ, ಉಪನ್ಯಾಸಕರ ಸಂಘ ಜಿಲ್ಲಾ ಅಧ್ಯಕ್ಷ ಮಲ್ಲಪ್ಪ, ಸಂಘಟಕ ಐ ಕೆ ಪಾಟೀಲ್ ವೇದಿಕೆಯ ಮೇಲೆಉಪಸ್ಥಿತರಿದ್ದರು.ಕಾಲೇಜಿನ ಪ್ರಾಚಾರ್ಯ ಡಾ.ಮೋಹನ್ ರಾಜ್ ಪತ್ತಾರ ಸ್ವಾಗತಿಸಿದರು.

# ಮಹಿಳಾ ಶಿಕ್ಷಣಕ್ಕೆ ಆದ್ಯತೆ ನೀಡಿ:ಅಂಕುಶ ಢೋಲೆ

**ಭಾಲ್ಕಿ,ಸೆ.12**– ಇಂದಿನ ಪೈಪೋಟಿ ಯುಗದಲ್ಲಿ ಸ್ತ್ರೀಯರು ಸ್ವಾವಲಂಬಿ ಜೀವನ ಸಾಗಿಸಬೇಕಾದರೆ ಪಾಲಕರು ಮಹಿಳಾ ಶಿಕ್ಷಣಕ್ಕೆ ಪ್ರಥಮಾದ್ಯತೆ ನೀಡಬೇಕು ಎಂದು ಎಸ್‌ವ್ಹಿ ಸಂಸ್ಥೆಯ ಆಡಳಿತಾಧಿಕಾರಿ ಅಂಕುಶ ಢೋಲೆ ಹೇಳಿದರು.

ಇಲ್ಲಿನ ಅಕ್ಕಮಹಾದೇವಿ ಕನ್ಯೆ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡ ಪ್ರತಿಭಾ ಪುರಸ್ಕಾರ ಮತ್ತು 2025–26ನೇ ಸಾಲಿನ ಪಿಯು ಪ್ರಥಮ ವರ್ಷದ ಮಕ್ಕಳ ಸ್ವಾಗತ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಎಸ್.ವ್ಹಿ. ಸಂಸ್ಥೆಯ ಅಧ್ಯಕ್ಷರಾದ ಈಶ್ವರ ಖಂಡ್ರೆ ಅವರ ಮಾರ್ಗದರ್ಶನದಲ್ಲಿ ಅಕ್ಕಮಹಾದೇವಿ ಕನ್ಯೆ ಪದವಿ ಪೂರ್ವ ಕಾಲೇಜಿನಲ್ಲಿ ಗ್ರಾಮೀಣ ಭಾಗದ ರೈತಾಪಿ ಕುಟುಂಬದ ವಿದ್ಯಾರ್ಥಿನಿಯರಿಗೆ ಅತ್ಯಂತ ಕಡಿಮೆ ಶುಲ್ಕದಲ್ಲಿ ಸಂಸ್ಕಾರಭರಿತ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ ಎಂದರು.

ನಿ.ಪ್ರಾಚಾರ್ಯ ಅಶೋಕ ರಾಜೋಳೆ ಮಾತನಾಡಿ,ದೇಶದ ಪ್ರಗತಿಯಲ್ಲಿ ಮಹಿಳೆಯರ ಪಾತ್ರ ಶ್ರೇಷ್ಠವಾಗಿದೆ.ಮಕ್ಕಳು ದುಶ್ಚಟ–ದುರ್ಗುಣಗಳಿಂದ ಅಂತರ ಕಾಪಾಡಿ ಆದರ್ಶ ಜೀವನ ರೂಪಿಸಿಕೊಳ್ಳಬೇಕು ಎಂದು ಹೇಳಿದರು. ಸರ್ಕಾರಿ ಪಪೂ ಕಾಲೇಜು ಪ್ರಾಚಾರ್ಯ ಸುಖದೇವ ಬಿರಾದಾರ ಮಾತನಾಡಿ,ಪಿಯು ಶಿಕ್ಷಣ ವಿದ್ಯಾರ್ಥಿ ಜೀವನದ ಪ್ರಮುಖ ಘಟ್ಟವಾಗಿದೆ ಎಂದರು.ಸಿ.ಬಿ. ಪದವಿ ಕಾಲೇಜಿನ ಪ್ರಾಚಾರ್ಯ ಡಾ.ಸಂತೋಷ ತೀರ್ಥೆ ಮಾತನಾಡಿ,ಮಕ್ಕಳು ಉನ್ನತ ಗುರಿಯೊಂದಿಗೆ ಉನ್ನತ ಶಿಕ್ಷಣ



ಪಡೆದು ಹೆತ್ತವರಿಗೆ ಕೀರ್ತಿ ತರಬೆಕು ಎಂದು ಹೇಳಿದರು.

ಪ್ರಾಚಾರ್ಯ ಭೀಮರಾವ ಗಿರಿ ಪ್ರಾಸ್ತಾವಿಕ ಮಾತನಾಡಿ,ಸಂಸ್ಥೆ ಅಧ್ಯಕ್ಷರೂಆದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಕಾರ್ಯದರ್ಶಿ ಸಂಸದ ಸಾಗರ ಖಂಡ್ರೆ ಅವರ ಶೈಕ್ಷಣಿಕ ಕಾಳಜಿಯಿಂದ ಪ್ರತಿ ವರ್ಷ ನಮ್ಮ ಕಾಲೇಜಿನ ಪಿಯು ಫಲಿತಾಂಶ ಕ–ಕ ಭಾಗದಲ್ಲಿಯೇ ಅತ್ಯುತ್ತಮವಾಗಿರುತ್ತದೆ ಎಂದು ತಿಳಿಸಿದರು.

ಪ್ರತಿಭಾ ಪುರಸ್ಕಾರ:ಕಳೆದ ಸಾಲಿನಲ್ಲಿ ಗರಿಷ್ಠ ಅಂಕ ಪಡೆದ ಪಿಯು ದ್ವಿತೀಯ ಮಕ್ಕಳಿಗೆ ಪ್ರಶಸ್ತಿ ಪತ್ರ ಮತ್ತು ನಗದು ಬಹುಮಾನ ನೀಡಿ ಗೌರವಿಸಲಾಯಿತು. ಐಟಿಐ ಕಾಲೇಜು ಪ್ರಿನ್ಸಿಪಾಲ್ ಸಂಗಪ್ಪ ಹುಲಸುರೆ,ಲಕ್ಷ್ಮಿಬಾಯಿ ಖಂಡ್ರೆ ಪಬ್ಲಿಕ್ ಸ್ಕೂಲ್ ಪ್ರಾಚಾರ್ಯ ಸಂತೋಷ ಮಿರಜಕರ್ ಸೇರಿದಂತೆ ಕಾಲೇಜು ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ಕು.ಸ್ವಾತಿ ಗಣಪತಿ ಸ್ವಾಗತಿಸಿದರು. ಪ್ರೊ.ಲಾವಣ್ಯ ಶಿವಸ್ವಾಮಿ ನಿರೂಪಿಸಿದರು.ಕು.ಪೂಜಾ ಕರಬಸಯ್ಯ ವಂದಿಸಿದರು

ಯುವ ಮಾರ್ಗ

ಶನಿವಾರ : 13–09–2025

# ಕ್ರಿಮಿನಲ್‌ಗಳ ಜೊತೆ ಗುರುತಿಸಿಕೊಂಡರೆ ಕಠಿಣ ಕ್ರಮ : ಸೀಮಂತ್‌ಕುಮಾರ್ ಸಿಂಗ್ ಎಚ್ಚರಿಕೆ



**ಬೆಂಗಳೂರು,ಸೆ.12–** ಕ್ರಿಮಿನಲ್‌ಗಳ ಜೊತೆ ಗುರುತಿಸಿಕೊಂಡರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಎಚ್ಚರಿಸಿದ್ದಾರೆ.

ಥಣಿಸಂದ್ರದ ಸಿಎಆರ್ ಕವಾಯತು ಮೈದಾನದಲ್ಲಿಂದು ಹಮಿಕೊಂಡಿದ್ದ ಮಾಸಿಕ ಪರೇಡ್‌ನಲ್ಲಿ ವಂದನೆ ಸ್ವಿಕರಿಸಿ ಮಾತನಾಡಿದ ಅವರು, ಕ್ರಿಮಿನಲ್‌ಗಳ ಜೊತೆ ಸೇರಿಕೊಂಡರೆ ಸಮಾಜಕ್ಕೆ ತಪ್ಪು ಸಂದೇಶ ಹೋಗುತ್ತದೆ, ಯಾವ ಕಾರಣಕ್ಕೂ ಅಂತಹ ಸಿಬ್ಬಂದಿಯನ್ನು ಬಿಡುವು ದಿಲ್ಲ, ಪೊಲೀಸ್ ಇಲಾಖೆಗೆ ಸೇರಿದ್ದೀರಿ, ಒಂದು ಟೀಂ ಆಗಿ ಉತ್ತಮವಾಗಿ ಕೆಲಸ ಮಾಡಬೇಕು ಎಂದು ಅವರು ಎಚ್ಚರಿಸಿದರು.

ಬಂದೋಬಸ್ತ್ ವೇಳೆ ಮೊದಲು ನಿಮನ್ನು ನೀವು ರಕ್ಷಣೆ ಮಾಡಿಕೊಂಡು ಹೆಲ್ಮೆಟ್, ಲಾಠಿ ಹಿಡಿದು ಕರ್ತವ್ಯದಲ್ಲಿ ತೊಡಗಿಕೊಂಡರೆ ಸಾರ್ವಜನಿಕರನ್ನು ರಕ್ಷಣೆ ಮಾಡಬಹುದು ಎಂದು ಸಿಬ್ಬಂದಿಗಳಿಗೆ ಸಲಹೆ ನೀಡಿದರು.

ಇತ್ತೀಚೆಗೆ ಬಂದೋಬಸ್ತ್‌ನಲ್ಲಿ ಯಾರೂ ಕೂಡ ಹೆಲ್ಮೆಟ್ ಹಾಗೂ ಲಾಠಿ ತೆಗೆದುಕೊಂಡು ಹೋಗದಿರುವುದನ್ನು ಗಮನಿಸಿದ್ದೇನೆ. ಕಾಟಾಚಾರಕ್ಕೆ ನಿಂತರೆ ಆಗುವುದಿಲ್ಲ. ಪ್ರತಿ ಹಂತದಲ್ಲೂ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದು ಅತಿಮುಖ್ಯ. ಅಧಿಕಾರಿಗಳು ಬಂದೋಬಸ್ತ್ ಕರ್ತವ್ಯಕ್ಕೆ ಹೋಗುವ ಸಿಬ್ಬಂದಿಯನ್ನು ತಪಾಸಣೆ ಮಾಡಿ ಕಳುಹಿಸಬೇಕು ಎಂದರು.

ನೀವು ಕರ್ತವ್ಯಕ್ಕೆ ತೆರಳುವಾಗ ಸಮವಸ್ತ್ರ ಇದ್ದರೆ ಸಾಲುವುದಿಲ್ಲ, ಬಂದೋಬಸ್ತ್ ನೋಡಿಕೊಳ್ಳುವವರು ಆಯುಧಗಳ ಜೊತೆಗೆ ತೆರಳಬೇಕು. ನಗರಕ್ಕೆ ಕೆಎಸ್‌ಆರ್‌ಪಿ ತುಕಡಿ ಬಂದಾಗಲೂ ಸಹ ಕಡ್ಡಾಯವಾಗಿ ಲಾಠಿ, ಹೆಲ್ಮೆಟ್ ಜೊತೆಯಲ್ಲಿರಬೇಕು ಎಂದು ಅವರು ಹೇಳಿದರು.

ಸರ್ಕಾರದ ಗೃಹ ಇಲಾಖೆಯಿಂದ ಪೊಲೀಸ್ ಇಲಾಖೆಗೆ ಸೌಲಭ್ಯಗಳು ಬರುತ್ತಿದ್ದು, ಅದನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಅದೇ ರೀತಿ ಸಮಾಜಕ್ಕೆ ಒಳ್ಳೆಯ ರೀತಿ ಸೇವೆ ಮಾಡಲು ನೀವು ಕಾರಣರಾಗಬೇಕು ಎಂದು ಅವರು ತಿಳಿಸಿದರು.

ವೃತ್ತಿ ಆಧಾರಿತ ಹಾಗೂ ವೈಯಕ್ತಿಕ ಜೀವನ ಎರಡನ್ನೂ ನಿಭಾಯಿಸಬೇಕು. ಹಬ್ಬಗಳನ್ನು ಕುಟುಂಬದೊಂದಿಗೆ ಆಚರಿಸಿ, ಕರ್ತವ್ಯವಿದ್ದಾಗ ನಿಷ್ಠೆಯಿಂದ ಸೇವೆ ಸಲ್ಲಿಸಿ ಬೆಂಗಳೂರು ನಗರಕ್ಕೆ ಒಳ್ಳೆಯ ಹೆಸರು ಬರಲು ಕಾರಣರಾಗಬೇಕು ಎಂದು ಸಿಬ್ಬಂದಿಗಳಿಗೆ ಕರೆ ನೀಡಿದರು.

ಪೊಲೀಸ್ ಸಿಬ್ಬಂದಿಗಳಿಗಾಗಿ ಆರೋಗ್ಯ ತಪಾಸಣೆಗಾಗಿ ಋಷಿ ಅಭಿಯಾನ ಆರಂಭವಾಗಿದೆ. ಎಲ್ಲಾ ಸಿಬ್ಬಂದಿಯೂ ತಪಾಸಣೆ ಮಾಡಿಸಿಕೊಂಡು ತಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಕಾರ್ಯಕ್ರಮ ಯಶಸ್ವಿಯಾದರೆ ಮೂರು ತಿಂಗಳಿಗೊಮೆ ಈ ಅಭಿಯಾನವನ್ನು ಮಾಡಲಾಗುವುದು ಎಂದರು.

ಪ್ರತಿ ಶುಕ್ರವಾರ ಕಡ್ಡಾಯವಾಗಿ ಪೆರೇಡ್‌ನಲ್ಲಿ ಪಾಲ್ಗೊಳ್ಳಬೇಕು. ಪರೇಡ್ ಮಾಡುವುದರಿಂದ ಶಿಸ್ತು ಬರಲಿದೆ. ಪರೇಡ್ ಮೈದಾನಕ್ಕೆ ಬಂದ ತಕ್ಷಣ ತಾವು ತರಬೇತಿ ಸಮಯದಲ್ಲಿ ಕಲಿಸಿದ ಪಾಠವನ್ನು ನೆನಪಿಸಿಕೊಳ್ಳಬೇಕು. ಕಾನ್ಸ್ ಸ್ಟೆಬಲ್ ಮಟ್ಟದಿಂದ ಅಧಿಕಾರಿ ಮಟ್ಟದವರೆಗೂ ಪರೇಡ್‌ನಲ್ಲಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು.

ಪ್ರತಿ ಮಂಗಳವಾರ ಮತ್ತು ಶುಕ್ರವಾರ ಇಲಾಖೆಯ ನಿಯಮಾನುಸಾರ ಎಷ್ಟು ಸಿಬ್ಬಂದಿ ಇರುತ್ತಾರೊ, ಅಷ್ಟು ಮಂದಿಯೂ ವೆಪನ್ ಡ್ರಿಲ್, ಲಾಠಿ ಡ್ರಿಲ್ ಮಾಡಬೇಕು ಎಂದು ಅವರು ಸೂಚಿಸಿದರು. ಇದಕ್ಕೂ ಮೊದಲು ಉತ್ತಮವಾಗಿ ಪರೇಡ್ ಮಾಡಿದ ಕಾನ್ಸ್‌ಟೆಸೇಬಲ್ ಹಾಗೂ ಅಧಿಕಾರಿ ವರ್ಗವನ್ನು ಆಯುಕ್ತರು ಶ್ಲಾಘಿಸಿದರು.

# ರಾಜ್ಯದಲ್ಲಿ ಸೆ.22ರಿಂದ ಜಾತಿ ಗಣತಿ ಡಿಸೆಂಬರ್ ಒಳಗೆ ವರದಿ



**ಬೆಂಗಳೂರು,ಸೆ.12**–ರಾಜ್ಯದಲ್ಲಿ ಕರ್ನಾಟಕ ರಾಜ್ಯಹಿಂದುಳಿದ ವರ್ಗಗಳ ಆಯೋಗದಿಂದ ಇದೇ ಸೆ. 22 ರಿಂದ ಅ.7ರ ವರೆಗೂ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಕಟಿಸಿದರು.

ತಮ್ಮ ಗೃಹ ಕಚೇರಿ ಕೃಷ್ಣಾದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಹಿಂದುಳಿದ ವರ್ಗಗಳ ಆಯೋಗದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಬಗ್ಗೆ ಪ್ರಕಟಿಸಿ ಸಮೀಕ್ಷೆಯ ಸ್ವರೂಪದ ಬಗ್ಗೆ ಸಮಗ್ರ ವಿವರ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಸಮೀಕ್ಷಾ ವರದಿಯನ್ನು ಡಿಸೆಂಬರ್ ಒಳಗೆ ಆಯೋಗ ಸಲ್ಲಿಸಲಿದೆ ಎಂದರು.

ಎಲ್ಲ ಜಾತಿ ಧರ್ಮದವರ ದತ್ತಾಂಶ ಅಂಗೈಯಲ್ಲಿದ್ದರೆ, ಮಾತ್ರ ಸಾಮಾಜಿಕ ನ್ಯಾಯದ ವಿಶೇಷ ಕಾರ್ಯಕ್ರಮಗಳನ್ನು ರೂಪಿಸಲು ಸಾಧ್ಯ. ಹಾಗಾಗಿ ರಾಜ್ಯದ 7 ಕೋಟಿ ಜನರ ಸಾಮಾಜಿಕ, ಶೈಕ್ಷಣಿಕ ಸ್ಥಿತಿಗತಿ ಅರಿಯಲು ಈ ಸಮೀಕ್ಷೆ ನಡೆಸಲಾಗುತ್ತದೆ. ಅತ್ಯಂತ ವೈಜ್ಞಾನಿಕವಾಗಿ ಆದಷ್ಟು ಜಾಗ್ರತೆಯಿಂದ ಸಮೀಕ್ಷೆ ನಡೆಸಿ ವರದಿ ಕೊಡುವಂತೆ ಹಿಂದುಳಿದ ವರ್ಗದ ಆಯೋಗಕ್ಕೆ ಸೂಚನೆ ನೀಡಿದ್ದೇನೆ ಎಂದು ಅವರು ಹೇಳಿದರು.ಇ ಸಮೀಕ್ಷಾ ಕಾರ್ಯಕ್ಕೆ 1 ಲಕ್ಷ 85 ಸಾವಿರ ಶಿಕ್ಷಕರನ್ನು ಬಳಸಿಕೊಳ್ಳಲಾಗುತ್ತದೆ. ದಸರಾ ರಜವನ್ನು ಗಮನದಲ್ಲಿಟ್ಟುಕೊಂಡು ಸೆ. 22 ರಿಂದ ಅ. 7ರವರೆಗೆ ಸಮೀಕ್ಷಾ ಕಾರ್ಯವನ್ನು ನಡೆಸಲಾಗುತ್ತದೆ. ಪ್ರತಿ ಶಿಕ್ಷಕರಿಗೆ ಸಮೀಕ್ಷೆ 120 ರಿಂದ 150 ಮನೆಗಳ ವ್ಯಾಪ್ತಿಯನ್ನು ನಿಗದಿಪಡಿಸಲಾಗಿದೆ ಎಂದು ಅವರು ಹೇಳಿದರು.

ಸಮೀಕ್ಷಾ ಕಾರ್ಯದಲ್ಲಿ ಪ್ರತಿಯೊಬ್ಬರೂ ಪಾಲ್ಗೊಳ್ಳಬೇಕು. ಯಾರೂ ಕೂಡ ಸಮೀಕ್ಷೆಯಿಂದ ಹೊರಗುಳಿಯಬಾರದು. ಸಮೀಕ್ಷೆಯಲ್ಲಿ 60 ಪ್ರಶ್ನೆಗಳನ್ನು ಕೇಳಲಾಗುವುದು. ಎಲ್ಲರೂ ಪ್ರತಿಯೊಂದು ಪ್ರಶ್ನೆಗಳಿಗೆ ಸಮರ್ಪಕಮಾಹಿತಿ ನೀಡಬೇಕು ಎಂದು ಅವರು ಮನವಿ ಮಾಡಿದರು.ಸಮೀಕ್ಷಾ ಕಾರ್ಯ ಒಳಮೀಸಲಾತಿ ಸಂಬಂಧ' ನ್ಯಾಯಮೂರ್ತಿ ನಾಗಮೋಹನ್‌ದಾಸ್ ಆಯೋಗ ನಡೆಸಿದ ಮಾದರಿಯಲ್ಲೇ ನಡೆಯಲಿದೆ. ಆನ್‌ಲೈನ್‌ಮೂಲಕವೂ ಸಮೀಕ್ಷೆಯಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಆಯೋಗದ ಸಹಾಯವಾಣಿ ಸಂಖ್ಯೆ–8050770004ಕ್ಕೆ ಕರೆ ಮಾಡಿ ಸಾರ್ವಜನಿಕರು ಸಮೀಕ್ಷೆ ಕುರಿತು ಯಾವುದೇ ದೂರು ಮತ್ತು ಮಾಹಿತಿಯನ್ನು ಪಡೆಯಬಹುದು ಎಂದು ಅವರು ಹೇಳಿದರು.

ಸಮೀಕ್ಷಾ ಪೂರ್ವದಲ್ಲಿ ಪ್ರತಿಯೊಂದು ಮನೆಯ ವಿದ್ಯುತ್ ಮೀಟರ್ ಆಧಾರದಲ್ಲಿ ಮನೆಯ ಜಿಯೋ ಟ್ಯಾಗ್ ಮಾಡಿ ಯುಎಚ್‌ಐಡಿ ವಿಶೇಷ ಸಂಖ್ಯೆಯನ್ನು ನಮೂದಿಸಲಾಗುವುದು. ಈಗಾಗಲೇ 1 ಕೋಟಿ 55 ಲಕ್ಷ ಮನೆಗಳಿಗೆ ಯುಎಚ್‌ಐಡಿ ಸಂಖ್ಯೆಯನ್ನು ಅಳವಡಿಸಲಾಗಿದೆ. ವಿದ್ಯುತ್ ಸಂಪರ್ಕಇಲ್ಲದ ಮನೆಯ ಸಮೀಕ್ಷೆಯನ್ನು ಮಾಡಲಾಗುವುದು. ಸಮೀಕ್ಷಾ ಸಂದರ್ಭದಲ್ಲಿ ಪಡಿತರ ಚೀಟಿ ಮತ್ತು ಆಧಾಋಕಾರ್ಡ್‌ನ್ನು ಮೊಬೈಲ್‌ಸಂಖ್ಯೆಗೆ ಲಿಂಕ್ ಮಾಡುವ ಕಾರ್ಯವನ್ನು ಮಾಡಲಾಗುವುದು ಎಂದರು.

ಈ ಸಮೀಕ್ಷೆಗಾಗಿ ರಾಜ್ಯಸರ್ಕಾರ ಸುಮಾರು 420 ಕೋಟಿ ರೂ.ನ್ನು ಒದಗಿಸಿದೆ. ಅಗತ್ಯ ಬಿದ್ದರೆ ಹೆಚ್ಚುವರಿ ಹಣವನ್ನೂ ನೀಡುತ್ತೇವೆ.ಸಮೀಕ್ಷೆ ನಡೆಸುವ ಶಿಕ್ಷಕರಿಗೆ ತಲಾ 20 ಸಾವಿರ ಗೌರವ ಸಂಭಾವನೆಯನ್ನು ನೀಡಲಾಗುವುದು. ಶಿಕ್ಷಕರ ಸಂಭಾವನಗೆ 325 ಕೋಟಿ ರೂ. ವೆಚ್ಚವಾಗುತ್ತದೆ ಎಂದು ಅವರು ಹೇಳಿದರು.ಆಯೋಗ ವೈಜ್ಞಾನಿಕವಾಗಿ ಯಾವುದೇ ಲೋಪವಾಗದಂತೆ ಸಮೀಕ್ಷೆ ನಡೆಸಬೇಕು. ನಿಗದಿತ ಅವಧಿಯ ಒಳಗಾಗಿ ಸಮೀಕ್ಷಾ ಕಾರ್ಯ ನಡೆಸಬೇಕು ಎಂದ ಅವರು, ಡಿಸೆಂಬರ್ ಒಳಗೆ ಸರ್ಕಾರದ ಕೈಸೇರುವ ನಿರೀಕ್ಷೆ ಇದೆ ಎಂದರು.

ಈ ಹಿಂದೆ 2015 ರಲ್ಲಿ ಕಾಂತ್‌ರಾಜ್ ಅವರು ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾಗಿದ್ದಾಗ ಶೈಕ್ಷಣಿಕ,ಸಾಮಾಜಿಕ ಸಮೀಕ್ಷೆಯನ್ನು ನಡೆಸಲಾಗಿತ್ತು. ಕಾಂತ್‌ರಾಜ್ ಅವರು ವರದಿಯನ್ನು ಸಲ್ಲಿಸಿ 10 ವರ್ಷ ಆದ ಕಾರಣ ಹೊಸದಾಗಿ ಸಮೀಕ್ಷೆ ನಡೆಸಲು ತೀರ್ಮಾನಿಸಲಾಗಿದೆ ಎಂದೂ ಅವರು ಹೇಳಿದರು.

ಯಾರೂ ಸಮೀಕ್ಷೆಯಿಂದ ಹೊರಗುಳಿಯಬಾರದು. ಆ ರೀತಿ ಸಿದ್ಧತೆ ಮಾಡಿಕೊಳ್ಳಲಾಗಿದೆ. ಜಾತಿ ಹೇಳಿಕೊಳ್ಳಲು ಕಷ್ಟವಾದರೆ ಸಹಾಯವಾಣಿಗೆ ಕರೆ ಮಾಡಿ ಜಾತಿ ಹೇಳಬಹುದು.ಆಶಾ ಕಾರ್ಯಕರ್ತರು ನಾಳೆಯಿಂದಲೇ ಮನೆ ಮನೆಗೆ ಹೋಗಿ 60 ಪ್ರಶ್ನೆಗಳ ನಮೂನೆಯನ್ನು ಪ್ರತಿ ಮನೆಗೆ ತಲುಪಿಸುತ್ತಾರೆ. ನಂತರ ಶಿಕ್ಷಕರು ಸಮೀಕ್ಷೆಗೆ ಹೋಗುತ್ತಾರೆ. ಮತಾಂತರಗೊಂಡವರು ಅಥವಾ ಜಾತಿ ಗೊಂದಲ ಇದ್ದುದ್ದನ್ನು ಆಯೋಗದ ತಜ್ಞರ ತಂಡ ವಿಶ್ಲೇಷಣೆ ಮಾಡಿ ಎಲ್ಲವನ್ನೂ ತೀರ್ಮಾನಿಸುತ್ತದೆ ಎಂದರು.

ಅಮೆರಿಕಾದಲ್ಲೂ ಕರಿಯರಿಗೆ ಅಫರ್‌ಮೇಟಿವ್ ಆಕ್ಷನ್ ಅಂತ ಇದೆ. ನಮ್ಮಲ್ಲಿ ಮೀಸಲಾತಿ ಇದೆ, ನಾವು ಬಡತನ, ನಿರುದ್ಯೋಗ, ಅನರಕ್ಷತೆ ಹೋಗಲಾಡಿಸಲು ಸಂವಿಧಾನದ ಪ್ರಕಾರ ವಿಶೇಷ ಕಾರ್ಯಕ್ರಮಗಳನ್ನು ರೂಪಿಸಬೇಕಿದೆ. ಅಸಮಾನತೆಯನ್ನು ತೊಲಿಸಲು ಸ್ವಾತಂತ್ರ್ಯ ದೊರೆತು ಇಷ್ಟು ವಷಗಳಾದರು ಸಾಧ್ಯವಾಗಿಲ್ಲ. ಸಮಾನತೆಯನ್ನು ಸಮಾನ ಅವಕಾಶವನ್ನು ಒದಗಿಸಲು ಜನರ ಆರ್ಥಿಕ ಸ್ಥಿತಿ, ಶೈಕ್ಷಣಿಕ ಸ್ಥಿತಿ ಜಾತಿ ಧರ್ಮ ಎಲ್ಲದರ ಮಾಹಿತಿ ಬೇಕಿದೆ. ಹಾಗಾಗಿಯೇ ಈ ಶೈಕ್ಷಣಿಕ, ಸಾಮಾಜಿಕ ಸಮೀಕ್ಷೆ ನಡೆಸುತ್ತಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ದೇಶದಲ್ಲಿ ಪ್ರಜಾಪ್ರಭುತ್ವ ಉಳಿಯಬೇಕಾದರೆ, ನಾವು ಅಸಮಾನತೆಯನ್ನು ತೊಲಗಿಸಲೇಬೇಕು.ಹಾಗಾಗಿ ಸಮಾನ ಅವಕಾಶ ಒದಗಿಸಲು ದತ್ತಾಂಶಗಳ ಮಾಹಿತಿ ಅಗತ್ಯವಿದೆ. ಈ ಸಮೀಕ್ಷೆಯಿಂದ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಯನ್ನು ಅರಿತು ಅದಕ್ಕೆ ತಕ್ಕಂತೆ ಕಾರ್ಯಕ್ರಮಗಳನ್ನು ರೂಪಿಸಲು ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸಚಿವ ಶಿವರಾಜ್‌ತಂಗಡಗಿ, ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂದನ್ ನಾಯ್ಡು, ಆಯೋಗದ ಸದಸ್ಯರುಗಳು, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಜೀರ್‌ಅಹ್ಮದ್ ಉಪಸ್ಥಿತರಿದ್ದರು.

# 3 ತಿಂಗಳಲ್ಲಿ ಹಿಂದೂ ವಿರೋಧಿ ಕಾಂಗ್ರೆಸ್ ಸರ್ಕಾರ ಪತನವಾಗಲಿದೆ : ಯತ್ನಾಳ್ ಭವಿಷ್ಯ



**ಮೈಸೂರು, ಸೆ.12–** ಹಿಂದೂಗಳ ಧರ್ಮಾಚರಣೆಗೆ ಅಡ್ಡಿ ಪಡಿಸುತ್ತಿರುವ ಸಿದ್ದರಾಮಯ್ಯ ಅವರ ಸರ್ಕಾರ ಮುಂದಿನ 3 ತಿಂಗಳಲ್ಲೆ ಪತನವಾಗಲಿದೆ ಎಂದು ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಭವಿಷ್ಯ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಣಪತಿ ವಿಸರ್ಜನೆ ಹಾಗೂ ಇತರೆ ಸಂದರ್ಭಗಳಲ್ಲಿ ಮಸೀದಿಗಳಿಂದ ಕಲ್ಲು ತೂರಾಟ ನಡೆಸಿರುವುದು, ಹಲವು ಕಡೆ ಪಾಕಿಸ್ತಾನದ ಧ್ವಜರೋಹಣ, ಪಾಕಿಸ್ತಾನದ ಪರ ಘೋಷಣೆ ಸೇರಿದಂತೆ ಅನೇಕ ದೇಶ ವಿರೋಧಿ ಚಟುವಟಿಕೆಗಳು ನಡೆಯುತ್ತಿವೆ. ಹಿಂದೂ ವಿರೋಧಿ ಧೋರಣೆಯನ್ನು ಬದಲಾಯಿಸಿಕೊಳ್ಳದಿದ್ದರೆ 2028ಕ್ಕೂ ಮುಂಚೆಯೆ ಸಿದ್ದರಾಮಯ್ಯ ಅಧಿಕಾರ ಕಳೆದುಕೊಳ್ಳುತ್ತಾರೆ ಎಂದು ಹೇಳಿದರು.

ಮಂಡ್ಯ ಜಿಲ್ಲೆಯ ಮದ್ದೂರಿನಲ್ಲಿ ಗಣೇಶೋತ್ಸವದ ಮೇಲೆ ಕಲ್ಲು ತೂರಿದ ಪ್ರಕರಣದ ವಿರುದ್ಧ ಪ್ರತಿಭಟನೆಗಳಾದಾಗ ಬಿಜೆಪಿ ನಾಯಕರ ಎದುರು ಕಾರ್ಯಕರ್ತರು ಯತ್ನಾಳ್ ಸ್ಥಳಕ್ಕೆ ಬರಬೇಕೆಂದು ಆಗ್ರಹಿಸಿದ್ದರು. ಅದರಂತೆ ನಾನು ಅಲ್ಲಿಗೆ ಹೋಗಿದ್ದೆ. ಇಂದು ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ, ರಾಜ್ಯದಲ್ಲಿ ಭ್ರಷ್ಟ ಸರ್ಕಾರ ತೊಲಗಬೇಕು, ಹೊಂದಾಣಿಕೆಯ ರಾಜಕಾರಣ ಕೊನೆಯಾಗಬೇಕು ಎಂದು ದೇವರಲ್ಲಿ ಪ್ರಾರ್ಥಿಸುವುದಾಗಿ ಹೇಳಿದರು.

ಗಣೇಶ ವಿಸರ್ಜನಾ ಸಂದರ್ಭದಲ್ಲಿ ಕಲ್ಲು ತೂರಾಟ ನಡೆಸಲು ಆಶ್ರಯ ನೀಡಿರುವ ಅಕ್ರಮ ಮಸೀದಿಗಳನ್ನು ನೆಲ ಸಮಗೊಳಿ ಸಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆಯುತ್ತೇನೆ. ಒಂದು ವೇಳೆ ಕ್ರಮ ತೆಗೆದುಕೊಳ್ಳದೇ ಹೋದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಹೇಳಿದರು.

ಇದೇ ಧೋರಣೆ ಮುಂದುವರೆದರೆ, ರಾಜ್ಯದಲ್ಲಿ ನೇಪಾಳದ ಮಾದರಿಯಲ್ಲಿ ಕ್ರಾಂತಿಯಾಗುತ್ತದೆ. ರಾಜ್ಯದಲ್ಲಿ ಮಸೀದಿಗಳನ್ನು ಪರಿಶೀಲನೆಗೊಳಪಡಿಸಬೇಕು. ಕಲ್ಲು ತೂರಾಟಕ್ಕೆ ಮುಂಚಿತ ವಾಗಿಯೇ ಮಸೀದಿಗಳಲ್ಲಿ ಕಲ್ಲುಗಳನ್ನು ಸಂಗ್ರಹಿಸಲಾಗಿದೆ. ಇದಕ್ಕೆ ಅವಕಾಶ ನೀಡಿದ ಬಗ್ಗೆ ತನಿಖೆಯಾಗಬೇಕು ಹಾಗೂ ಮಸೀದಿಗಳನ್ನು ತಪಾಸಣೆಗೊಳಪಡಿಸಬೇಕು ಎಂದರು.

ಕಾಂಗ್ರೆಸ್ ಸರ್ಕಾರ ತಮಗೆ ಮುಸ್ಲಿಮರು ಮಾತ್ರ ಮತ ಹಾಕಿದ್ದಾರೆ ಎಂಬಂತೆ ವರ್ತಿಸುತ್ತಿದೆ. ಹಿಂದೂ ವಿರೋಧಿ ನಿಲುವುಗಳನ್ನು ಪಾಲಿಸುತ್ತಿದೆ. ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್‌ರನ್ನು ಅಹ್ವಾನಿಸುವ ಸಿದ್ದರಾಮಯ್ಯ ಅವರಿಗೆ ಚಾಮುಂಡಿ ದೇವಿಯ ಶಾಪ ತಟ್ಟಲಿದೆ ಎಂದು ಹೇಳಿದರು. ರಾಜ್ಯದಲ್ಲಿ ಭ್ರಷ್ಟಾಚಾರ ವ್ಯಾಪಕವಾಗಿದೆ. ಸಾವಿರಾರು ಕೋಟಿ ಲೂಟಿಯಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ನಿಗಮಗಳ ಹಣವನ್ನು ದೋಚಲಾಗಿದೆ. ಭ್ರಷ್ಟ ಸರ್ಕಾರದ ಜೊತೆ ಬಿಜೆಪಿ ನಾಯಕರು ಕೈ ಜೋಡಿಸಿದ್ದಾರೆ. ಯಡಿಯೂರಪ್ಪ ಅವರ ವಿರುದ್ಧವೂ ಸಾಕಷ್ಟು ಭ್ರಷ್ಟಚಾರ ಪ್ರಕರಣಗಳಿವೆ. ಹೀಗಾಗಿ ಭ್ರಷ್ಟರೆಲ್ಲಾ ಸೇರಿ ಲೂಟಿ ಹೊಡೆಯುತ್ತಿದ್ದಾರೆ ಎಂದು ಆಕ್ರೊ?ಶ ವ್ಯಕ್ತಪಡಿಸಿದರು.

ಮುಂದಿನ ದಿನಗಳಲ್ಲಿ ನಮ ತಂಡದ ಸರ್ಕಾರ ರಚನೆಯಾಗಲಿದೆ. ಭ್ರಷ್ಟಾಚಾರ ರಹಿತವಾದ ಸರ್ಕಾರ ನೀಡುತ್ತೆ?ವೆ. ಹಿಂದುತ್ವದ ರಕ್ಷಣೆ ಹಾಗೂ ಅಭಿವೃದ್ಧಿ ಪರ ಆಡಳಿತ ನಡೆಸುತ್ತೆ?ವೆ ಎಂದು ಭರವಸೆ ನೀಡಿದರು.ಪೂಜ್ಯ ತಂದೆ ಮತ್ತು ಮಗ ಹೊರತು ಪಡಿಸಿ ಉಳಿದ ಎಲ್ಲಾ ಬಿಜೆಪಿ ನಾಯಕರೂ ನನ್ನ ಸಂಪರ್ಕದಲ್ಲಿದ್ದಾರೆ. ಯಡಿಯೂರಪ್ಪ ಅವರು ಅಮಿತ್ ಶಾ ಅವರ ಮುಂದೆ ಕುಳಿತು ಯತ್ನಾಳರನ್ನು ಉಚ್ಚಾಟನೆ ಮಾಡದೇ ಇದ್ದರೆ ನಾನು ಪಕ್ಷ ಬಿಟ್ಟು ಹೋಗುತ್ತೇನೆ ಎಂದು ಬ್ಲಾಕ್‌ಮೇಲ್ ಮಾಡಿದ್ದರು. ಅದಕ್ಕಾಗಿ ನನ್ನನ್ನು ಬಿಜೆಪಿಯಿಂದ ಉಚ್ಚಾಟಿ ಸಲಾಗಿದೆ. ಈ ಕ್ರಮ ತೆಗೆದುಕೊಂಡಿದ್ದು ತಪ್ಪಾಗಿದೆ ಎಂದು ಖುದ್ದು ಅಮಿತ್ ಶಾ ಅವರೇ ಪಶ್ಚಾತ್ತಾಪದ ಮಾತುಗಳನ್ನಾಡಿದ್ದಾರೆ ಎಂದು ತಿಳಿದು ಬಂದಿದೆ ಎಂದರು.

ಪ್ರಧಾನ ಮಂತ್ರಿಯವರು ಭ್ರಷ್ಟಚಾರ ರಹಿತ ಹಾಗೂ ಕುಟುಂಬ ರಾಜಕಾರಣವನ್ನು ವಿರೋಧಿಸುತ್ತಾರೆ. ರಾಜ್ಯ ಬಿಜೆಪಿಯಲ್ಲಿ ಈ ಎರಡೂ ಇವೆ. ಮುಂದಿನ ದಿನಗಳಲ್ಲಿ ಇದು ಸರಿ ಹೋಗದೇ ಇದ್ದರೆ 2028ರ ವೇಳೆಗೆ ಹೊಸ ಪಕ್ಷ ಸ್ಥಾಪನೆ ಮಾಡಿ, ಚುನಾವಣೆ ಎದುರಿಸುತ್ತೆವೆ. ನಮ ಪಕ್ಷ ಅಧಿಕಾರಕ್ಕೆ ಬರಲಿದೆ ಎಂದು ಹೇಳಿದರು.

# ಕಲ್ಲು ತೂರಿದವರು ಯಾರೇ ಇರಲಿ ಕ್ರಮ

**ಬೆಂಗಳೂರು,ಸೆ.12**–ಮದ್ದೂರಿನಲ್ಲಿ ಗಣೇಶ ವಿಸರ್ಜನೆ ಸಂದರ್ಭದಲ್ಲಿ ನಡೆದ ಘಟನೆಗೆ ಸಂಬಂಧಿಸಿದಂತೆ ಯಾರೇ ಕಾನೂನಿಗೆ ವಿರುದ್ಧವಾಗಿ ನಡೆದುಕೊಂಡಿದ್ದರೆ ಅವರ ವಿರುದ್ಧ ಪೊಲೀಸರು ಕ್ರಮಕೈಗೊಳ್ಳುತ್ತಾರೆ. ಆದರೆ, ಯಾರೇ ಆಗಲಿ ಅಲ್ಲಿಗೆ ಹೋಗಿ ಪ್ರಚೋದನಾಕಾರಿ ಭಾಷಣ ಮಾಡುವುದು ಸರಿಯಲ್ಲ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮದ್ದೂರು ಘಟನೆಯಲ್ಲಿ ರಾಜಕೀಯ ಮಾಡುವುದು ಬೇಡ ಎಂದು ಮೊದಲಿನಿಂದಲೂ ಹೇಳುತ್ತಿದ್ದೇವೆ. ಇದರಲ್ಲಿ ರಾಜಕೀಯ ಮಾಡಬೇಡಿ. ಕಲ್ಲು ಹೊಡೆದವರನ್ನು ಹಿಡಿದು ಕಾನೂನು ಪ್ರಕಾರ ಕ್ರಮಕೈಗೊಳ್ಳುತ್ತಾರೆ ಎಂದ ಅವರು, ಕಲ್ಲು ಹೊಡೆದವರು ಮುಸಲ್ಮಾನ ಆಗಿರಲಿ, ಹಿಂದೂ ಆಗಿರಲಿ, ಮತ್ತೊಬ್ಬ ಆಗಿರಲಿ ಕಾನೂನು ಕ್ರಮ ನಿಶ್ಚಿತ ಎಂದರು. ಎಲ್ಲವನ್ನೂ ಪೊಲೀಸರಿಗೇ ಬಿಟ್ಟುಬಿಡೋಣ ಅವರು ಕ್ರಮಕೈಗೊಳ್ಳುತ್ತಾರೆ. ಪ್ರಚೋದನಕಾರಿ ಭಾಷಣ ಮಾಡಿ ಜನರನ್ನೆಲ್ಲ ಎಬ್ಬಿಸುವುದು ಸರಿಯಲ್ಲ. ವೀರಾ ವೇಷದಲ್ಲಿ ಮಾತನಾಡಿ ಬಳಸಬಾರದ ಪದಗಳನ್ನು ಬಳಸುವುರಿಂದ ಏನೂ ಸಾಧನೆಯಾಗಲ್ಲ ರಾಜಕೀಯ ಕಾರಣಕ್ಕೆ ಈ ರೀತಿ ಬಿಜೆಪಿಯವರು ಮಾತನಾಡುತ್ತಿದ್ದಾರೆ ಎಂದು ದೂರಿದರು.

ಮದ್ದೂರು ಘಟನೆಗೆ ಸಂಬಂಧಿಸಿದಂತೆ ಎಎಸ್‌ಪಿ ವರ್ಗಾವಣೆ ಕುರಿತು ಪ್ರತಿಕ್ರಿಯಿಸಿದ ಅವರು, ಆಂತರಿಕವಾಗಿ ಎಲ್ಲಿ ಲೋಪವಾಗಿದೆಯೋ ಅದಕ್ಕೆ ಕ್ರಮ ತೆಗೆದುಕೊಳ್ಳಬೇಕು. ಇನ್ಸ್‌ಪೆಕ್ಟರ್, ಸಬ್‌ಇನ್ಸ್‌ಪೆಕ್ಟರ್ ಯಾರೇ ಕರ್ತವ್ಯ ಲೋಪ ಮಾಡಿದರೂ ಇಲಾಖೆಯಿಂದ ಕ್ರಮ ಆಗುತ್ತೆ ಎಂದರು.

**ವಯೋಮಿತಿ ಹೆಚ್ಚಳ, ಪರಿಶೀಲನೆ**–ರಾಜ್ಯದಲ್ಲಿ ಪೊಲೀಸ್ ಕಾನ್ಸ್‌ಟೇಬಲ್ ವಯೋಮಿತಿ ಹೆಚ್ಚಳದ ಬಗ್ಗೆ ಚರ್ಚೆ ನಡೆದಿದೆ. ಬೇರೆ ಬೇರೆ ರಾಜ್ಯಗಳಲ್ಲಿ ಏನಿದೆ ಎಂಬುದನ್ನು ಪರಿಶೀಲಿಸಿ



2–3 ವರ್ಷ ವಯೋಮಿತಿ ಸಡಿಲಗೊಳಿಸುವ ಬಗ್ಗೆ ತೀರ್ಮಾನ ಮಾಡುತ್ತೇವೆ ಎಂದು ಹೇಳಿದರು.

ಧರ್ಮಸ್ಥಳದ 3 ಲಾಡ್ಜ್‌ಗಳಲ್ಲಿ ಸಾವುಗಳಾಗಿವೆ ಎಂದು ಮಹೇಶ್‌ತಿಮರೋಡಿ ದೂರು ಕೊಟ್ಟಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಈ ಬಗ್ಗೆ ಎಸ್‌ಐಟಿ ತೀರ್ಮಾನ ಮಾಡುತ್ತದೆ. ಎಸ್‌ಐಟಿ ವರದಿ ಬರುವವರೆಗೂ ನಾವು ಏನನ್ನೂ ಮಾತನಾಡುವುದು ಸರಿ ಹೋಗಲ್ಲ ಎಂದರು.

ಧರ್ಮಸ್ಥಳ ಪ್ರಕರಣದಲ್ಲಿ ಚಿನ್ನಯ್ಯನ ಬೆಂಬಲವಾಗಿ ನಿಂತವರನ್ನು ಬಂಧಿಸಿಲ್ಲ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಯಾರನ್ನು ಯಾವಾಗ ಬಂಧಿಸಬೇಕು ಎಂಬುದನ್ನು ಎಸ್‌ಐಟಿ ತೀರ್ಮಾನಿಸುತ್ತದೆ. ನಾವು ಹೀಗೆ ಮಾಡಿ ಎಂದು ಹೇಳಲು ಆಗಲ್ಲ ಎಂದರು.

ದಸರಾ ಉದ್ಘಾಟನೆಗೆ ನಿಯೋಜಿತವಾಗಿರುವ ಭಾನುಮುಸ್ತಾಕ್ ಅವರಿಗೂ ಸರ್ಕಾರ ಭದ್ರತೆಕೊಡುತ್ತದೆ. ಈ ಬಗ್ಗೆ ಯಾರೂ ಏನೂ ಹೇಳುವುದು ಬೇಕಿಲ್ಲ ಎಂದರು.

# ತಪ್ಪು ಮಾಡಿದ್ದರೆ ಶಿಕ್ಷೆಯಾಗಲಿ, ಅನ್ಯಾಯದ ವಿರುದ್ಧ ನಾನು ಕಾನೂನು ಹೋರಾಟ ನಡೆಸುತ್ತೇನೆ : ಎಸ್.ನಾರಾಯನ್

**ಬೆಂಗಳೂರು,ಸೆ.12–** ತಪ್ಪು ಮಾಡಿದ್ದರೆ ಶಿಕ್ಷೆಯಾಗಲಿ, ಅನ್ಯಾಯದ ವಿರುದ್ಧ ನಾನು ಕಾನೂನು ಹೋರಾಟ ನಡೆಸುತ್ತೇನೆ, ಧರ್ಮೋ ರಕ್ಷತಿ ರಕ್ಷಿತಃ ಎಂದು ಖ್ಯಾತ ನಟ, ನಿರ್ದೇಶಕರಾದ ಎಸ್.ನಾರಾಯಣ ಹೇಳಿದ್ದಾರೆ.

ಈ ಸಂಜೆಯೊಂದಿಗೆ ಮಾತನಾಡಿದ ಅವರು, ನನ್ನ ಹಾಗೂ ನನ್ನ ಕುಟುಂಬದ ಮೇಲೆ ಸೊಸೆ ಮಾಡಿರುವ ಆರೋಪಗಳು ಶುದ್ಧ ಸುಳ್ಳು. ಆಕೆ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ. ಕಾನೂನು ಪ್ರಕಾರ ಪ್ರಕ್ರಿಯೆಗಳು ನಡೆಯಲಿ. ನಾನು ಅದನ್ನು ಕಾನೂನಿನ ಮೂಲಕವೇ ಎದುರಿಸಲು ಸಿದ್ಧನಿದ್ದೇನೆ ಎಂದು ತಿಳಿಸಿದ್ದಾರೆ.ಇಂದಿನ ಸಮಾಜದಲ್ಲಿ ಮೌಲ್ಯಗಳು ಹಾಳಾಗುತ್ತಿವೆ. ಸಂಸ್ಕಾರ ಮರೆಯಾಗುತ್ತಿದೆ. ಇದು ಸಾಕಷ್ಟು ನೋವು ತರುತ್ತಿದೆ. ಇಂತಹ ಘಟನೆಗಳಿಗೆ ಪ್ರತಿಷ್ಠಿತ ವ್ಯಕ್ತಿಗಳನ್ನು ಟಾರ್ಗೆಟ್ ಮಾಡುವ ಪ್ರವೃತ್ತಿ ಹೆಚ್ಚುತ್ತಿರುವುದು ಆತಂಕಕಾರಿ ಎಂದು ಹೇಳಿದರು.

ಪಾಶ್ಚಿಮಾತ್ಯ ಸಂಸ್ಕೃತಿಗೆಮಾರು ಹೋಗಿ ಈಗ ಕೆಲವರು ನಮತನವನ್ನೆ ಮರೆಯುತ್ತಿದ್ದಾರೆ. ಕಾಲುಂಗುರ ತೊಡುವುದು, ಹಣೆಗೆ ಸಿಂಧೂರ, ಕೊರಳಿಗೆ ಮಾಂಗಲ್ಯ ಸರ ತೊಡುವುದನ್ನೂ ಸಹ ಕೆಲವರು ಬಿಟ್ಟಿದ್ದಾರೆ. ಇಂತಹ ಪರಿಸ್ಥಿತಿ ಮುಂದೆ ಯಾವ ಹಂತಕ್ಕೆ ತಲುಪುತ್ತದೆ ಎಂಬುದೇ ನನಗೆ ಕಳವಳ ಮೂಡಿಸಿದೆ.ನಮ ಕುಟುಂಬದಲ್ಲಿ ಯಾರೂ ಕೂಡ ಆಕೆಗೆ ಯಾವುದೇ ಹಿಂಸೆ ನೀಡಿಲ್ಲ. ನಮ ಮನೆಯ ಹೆಣ್ಣುಮಗಳು ಎಂಬಂತೆ ನೋಡಿಕೊಂಡಿದ್ದೆವು. ಆದರೆ ಸುಮಾರು ಒಂದೂವರೆ ವರ್ಷದ ನಂತರ ಈಗ ನಮ ಕುಟುಂಬದ ಮೇಲೆ ದೂರು ನೀಡಿರುವುದರ ಹಿಂದೆ ಯಾವುದೋ ದುರುದ್ದೇಶವಿದ್ದಂತೆ ಕಾಣುತ್ತಿದೆ. ಕಾನೂನಿನ ಮೇಲೆ ನನಗೆ ನಂಬಿಕೆಯಿದ್ದು, ಸತ್ಯ ಹೊರಬರಲಿದೆ ಎಂದು ಹೇಳಿದರು. ಆದರೆ ಇಂತಹ ಘಟನೆಗಳಿಂದ ಕುಟುಂಬದಲ್ಲಿ ಮನಃಶಾಂತಿ ಹಾಳಾಗುತ್ತದೆ. ಇದರ ನೋವು ಏನು ಎಂಬುದು ಅನುಭವಿಸಿದವರಿಗೇ ತಿಳಿದಿರುತ್ತದೆ ಎಂದು ಭಾವುಕರಾದರು.

## ಹೊಯ್ಸಳ, ಕೆಳದಿ ಚೆನ್ನಮ್ಮ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

**ರಾಯಚೂರು,ಸೆ.12–**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ 2025–26ನೇ ಸಾಲಿನ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ ಅಸಾಧಾರಣ ಪ್ರತಿಭೆಯುಳ್ಳ ಮಕ್ಕಳಿಗೆ ಜಿಲ್ಲಾ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಕ್ರೀಡೆ, ಕಲೆ, ಸಾಂಸ್ಕೃತಿಕ ಮತ್ತು ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿದ 05 ರಿಂದ 18 ವರ್ಷ ವಯೋಮಿತಿಯ ಮಕ್ಕಳ ಸಾಧನೆ ಗುರುತಿಸಿ ಪ್ರೋತ್ಸಾಹಿಸಲಾಗುವುದು. ಆಸಕ್ತರು, ಅರ್ಜಿ ನಮೂನೆಯೊಂದಿಗೆ ಇತ್ತೀಚಿನ ಭಾವಚಿತ್ರ ಲಗತ್ತಿಸಬೇಕು. ಅಸಾಧಾರಣ ಪ್ರತಿಭೆ ಹೊಂದಿರುವ ಬಗ್ಗೆ ಪತ್ರಿಕಾ ಪ್ರಕಟಣೆಯ ತುಣುಕು/ ಪ್ರಮಾಣ ಪತ್ರದೊಂದಿಗೆ ಸೆ.26ರೊಳಗಾಗಿ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ರಾಯಚೂರು ಇವರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳು ಉಪ ನಿರ್ದೇಶಕರ ಕಚೇರಿ ಮಂತ್ರಾಲಯ ರೋಡ್ ಐ.ಡಿ.ಎಸ್.ಎಮ್.ಟಿ ಲೇಔಟ್ ಎದುರುಗಡೆ ರಾಯಚೂರು ಇವರನ್ನು ಕಚೇರಿ ವೇಳೆಯಲ್ಲಿ ದೂರವಾಣಿ ಸಂಖ್ಯೆ: 08532–295646ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳು ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗಳ ಭರ್ತಿ

**ರಾಯಚೂರು,ಸೆ.12–**ಇಲ್ಲಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳಿಗೆ ಈಗಾಗಲೇ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಸ್ವೀಕರಿಸಿರುವ ಅರ್ಜಿಗಳಲ್ಲಿ ಅಭ್ಯರ್ಥಿಗಳ ವಾಸಸ್ಥಳದ ಹಾಗೂ ಇತರೆ ದಾಖಲಾತಿಗಳು ಸಲ್ಲಿಸದೇ ಇರುವ ಕಾರಣ ಅರ್ಜಿ ತಿರಸ್ಕೃತಗೊಂಡಿವೆ. ಮುಂದೆ ಈ ರೀತಿ ಮರುಕಳಿಸಬಾರದೆಂಬ ಹಾಗೂ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಇನ್ನು ಕೆಲ ದಿನಗಳಲ್ಲಿ ಸಹಾಯಕಿ ಹುದ್ದೆಯಿಂದ ಮುಂಬಡ್ತಿ ಹಾಗೂ ನಿವೃತ್ತಿ ಹೊಂದಿ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

ಅಭ್ಯರ್ಥಿಗಳು 10ನೇ ಹಾಗೂ ಪಿ.ಯು.ಸಿ. ತರಗತಿ ಅಂಕಪಟ್ಟಿ, ಅಂತರ ಪ್ರಮಾಣ ಪತ್ರ (ಪ್ರಸ್ತುತ), ವಾಸಸ್ಥಳ ಪ್ರಮಾಣ ಪತ್ರ (ಪ್ರಸ್ತುತ) ದಾಖಲಾತಿಗಳನ್ನು ಧೃಢೀಕರಣದೊಂದಿಗೆ ಅರ್ಜಿ ಸಲ್ಲಿಸಲು ಅಗತ್ಯ ದಾಖಲಾತಿಗಳ ಅವಶ್ಯಕತೆ ಇರುವ ಕಾರಣ ಮುಂಚಿತವಾಗಿ ಸಿದ್ಧಪಡಿಸಿಕೊಂಡು ಆನ್‌ಲೈನ್ ಮೂಲಕ ನಿಗದಿತ ಅವಧಿಯೊಳಗೆ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ.15ರಂದು ವಿವಿಧ ಹುದ್ದೆಗಳ ನೇಮಕಾತಿಗೆ ನೇರ ಸಂದರ್ಶನ

**ರಾಯಚೂರು,ಸೆ.12–** ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಸಂಚಾರಿ ಆರೋಗ್ಯ ಘಟಕಗಳಿಗೆ 2025–26ನೇ ಸಾಲಿಗೆ ಮಂಜೂರಾಗಿರುವ ವಿವಿಧ ಹುದ್ದೆಗಳನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿಯಮಾನುಸಾರ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಸೆ.15ರಂದು ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ.

ಹುದ್ದೆಗಳ ವಿವರ : ಎಂ.ಬಿ.ಬಿ.ಎಸ್. ವೈದ್ಯರು–08 ಹುದ್ದೆ, ಶುಶ್ರೂಷಕರು–08 ಹುದ್ದೆಗಳು ಹಾಗೂ ಪ್ರಯೋಗ ಶಾಲಾ ತಂತ್ರಜ್ಞರು–08 ಹುದ್ದೆಗಳು ಸೇರಿದಂತೆ ಒಟ್ಟು–24 ಹುದ್ದೆಗಳನ್ನು ಗುತ್ತಿಗೆ ಆಧಾರದ ನೇಮಕಾತಿಯನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿಯಮಾನುಸಾರ ಗುತ್ತಿಗೆ ಆಧಾರದ ಮೇಲೆ ಮೇರಿಟ್ ಕಮ್ ರೋಷ್ಟರ್ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುವುದು. ಅರ್ಹ ವಿದ್ಯಾರ್ಹತೆ ಹಾಗೂ ಗರಿಷ್ಠ 2 ವರ್ಷಗಳು ಸರ್ಕಾರಿ ಕ್ಷೇತ್ರದಲ್ಲಿ ಅನುಭವ ಹೊಂದಿದ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ಆಸಕ್ತರು, ಸೆಪ್ಟೆಂಬರ್ 15ರ ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಈ ಗುತ್ತಿಗೆ ಆಧಾರದ ನೇಮಕಾತಿಯು ಎನ್.ಹೆಚ್.ಎಂ. ನಿಯಮಾವಳಿಯ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಯೋಜನಾ ನಿರ್ವಹಣಾ ಘಟಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯ ರಾಯಚೂರು ಇವರನ್ನು ಕಚೇರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ. ಅಥವಾ ಮೊಬೈಲ್ ಸಂಖ್ಯೆ : 9449843121ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿಂದುಳಿದ ಜಾತಿಗಳ ಒಕ್ಕೂಟದ ತಾಲೂಕು ಅಧ್ಯಕ್ಷರಾಗಿ ಮಲ್ಲಿಕಾರ್ಜುನ ಜಕ್ಕಲದಿನ್ನಿ ಆಯ್ಕೆ

**ಯುವ ಮಾರ್ಗ ಸುದ್ದಿ**

**ಸಿರವಾರ, ಸೆ.12–** ತಾಲೂಕು ಹಿಂದುಳಿದ ವರ್ಗಗಳ ಒಕ್ಕೂಟದ ಅಧ್ಯಕ್ಷರಾಗಿ ಮಲ್ಲಿಕಾರ್ಜುನ ಜಕ್ಕಲದಿನ್ನಿ ಆಯ್ಕೆಯಾದರು, ಗೌರವಾಧ್ಯಕ್ಷರಾಗಿ ದೇವಣ್ಣ ನವಲಕಲ್ , ಕಾರ್ಯಾಧ್ಯಕ್ಷರಾಗಿ ರಾಘವೇಂದ್ರ ಖಾಜನಗೌಡ ಅವಿರೋಧವಾಗಿ ಆಯ್ಕೆಯಾದರು.



ಬುಧವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಜಿಲ್ಲಾ ಹಿಂದುಳಿದ ಜಾತಿಗಳ ಒಕ್ಕೂಟದ ಜಿಲ್ಲಾಧ್ಯಕ್ಷರಾದ ಕೆ.ಶಾಂತಪ್ಪ ನೇತೃತ್ವದಲ್ಲಿ ಸಭೆ ನಡೆಯಿತು.

ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಹನುಮಂತಪ್ಪ ಕಲ್ಲೂರ್ ಜಿಲ್ಲಾ ಕಾರ್ಯಾಧ್ಯಕ್ಷರಾದ ಖಾಜನ್ ಗೌಡ ಏಗನೂರು ಜಿಲ್ಲಾ ಕಾನೂನು ಘಟಕದ ಅಧ್ಯಕ್ಷರಾದ ವೈ. ಶ್ರೀಕಾಂತ್ ವಕೀಲರು ಜಂಬಣ್ಣ ನಿಲಗಲ್ ಜಂಬಣ್ಣ ಯಕಸಲಪುರ ಶರಣಪ್ಪ ಕಡಗಲ್ ದಾನಪ್ಪ ಯಾದವ್ ಭಾಸ್ಕರ್ ಇಟಗಿ, ಎಚ್.ಕೆ .ಅಮರೇಶ್, ಶಿವಣ್ಣ ವಕೀಲ ಕವಿತಾಳ,ಈಶ್ವರ್ ಸಿಂಗ್ ಠಾಕೂರ್ ರಾಜೇಶ್ ಕವಿತಾಳ, ತಿಮ್ಮಣ್ಣ ಕಟ್ಟಿಮನಿ, ಚಂದ್ರು ಹಡಪದ, ಪ್ರಭಾಕರ ಮರಾಟ, ಬಸವರಾಜ ನವಲಕಲ್ ವೆಂಕಟೇಶ ಕಲ್ಮಗೇರ್ ವಿವಿಧ ಸಮುದಾಯಗಳ ಮುಖಂಡರು ಭಾಗವಹಿಸಿದ್ದರು.

## ಪುರಸಭೆ ಉದ್ಯಾನವನ ಜಾಗ ಹದ್ದುಬಸ್ತ್‌ಗೆ ಜಿಲ್ಲಾಧಿಕಾರಿಗೆ ಕರವೇ ಮನವಿ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಸೆ.12–** ಪುರಸಭೆ ವ್ಯಾಪ್ತಿಯ ಎಲ್ಲಾ ಲೇಔಟ್‌ಗಳಲ್ಲಿರುವ ಉದ್ಯಾನವನ ಹಾಗೂ ನಾಗರೀಕರ ಸೌಲಭ್ಯಕ್ಕಾಗಿ ಮೀಸಲಿಟ್ಟ ಜಾಗವನ್ನು ಗುರುತಿಸಿ ಹದುಬಸ್ತ್ ಮಾಡಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ) ಬಣದ ತಾಲ್ಲೂಕು ಅಧ್ಯಕ್ಷ ಆಂಜನೇಯ ಭಂಡಾರಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.



ಲಿಂಗಸುಗೂರು ಪುರಸಭೆ ವ್ಯಾಪ್ತಿಯಲ್ಲಿನ ಸುಮಾರು ಲೇಔಟ್‌ಗಳಿದ್ದು, ಆ ಲೇಔಟ್‌ಗಳಲ್ಲಿರುವ ಉದ್ಯಾನವನ ಹಾಗೂ ನಾಗರೀಕ ಸೌಲಭ್ಯಕ್ಕಾಗಿ ಮೀಸಲಿಟ್ಟ ಜಾಗವನ್ನು ಅತಿಕ್ರಮಣ ಮಾಡಿಕೊಂಡು ಕಟ್ಟಡಗಳನ್ನು ನಿರ್ಮಿಸಲಾಗಿದೆ. ಇನ್ನು ಕೆಲವು ಎಲ್ಲಿ ಇವೆ ಎಂದು ತಿಳಿಯದಾಗಿದೆ. ಲೇಔಟ್ ಮಾಲೀಕರು ಉದ್ಯಾನವನ ಜಾಗವನ್ನು ನಿವೇ ಶಗಳನ್ನಾಗಿ ಪರಿವರ್ತಿಸಿ ಮಾರಾಟ ಮಾಡಿ ಕೊಂಡಿದ್ದಾರೆ.

ಕಾರಣ ಪುರಸಭೆ ವ್ಯಾಪ್ತಿಯಲ್ಲಿನ ಎಲ್ಲಾ ಲೇಔಟ್‌ಗಳಲ್ಲಿರುವ ಉದ್ಯಾನವನ ಹಾಗೂ ನಾಗರಿಕರ ಸೌಲಭ್ಯಕ್ಕಾಗಿ ಮೀಸಲಿಟ್ಟ ಜಾಗಗಳನ್ನು ಗುರುತಿಸಿ ಹದುಬಸ್ತ್ ಮಾಡಿ ಉದ್ಯಾನವನ ಹಾಗೂ ನಾಗರೀಕರ ಸೌಲಭ್ಯಕ್ಕಾಗಿ ಮೀಸಲಿಟ್ಟ ಜಾಗ ಎಂದು ಬೋರ್ಡ್ ಹಾಕಬೇಕು. ನಾಗರೀಕ ಸೌಲಭ್ಯಕ್ಕಾಗಿ ಮೀಸ ಲಿಟ್ಟ ಜಾಗವನ್ನು ವಿವಿಧ ನಾಗರಿಕರ ಸೌಲಭ್ಯ ನಿರ್ಮಿಸಲು ಅವಕಾಶ ಮಾಡಿಕೊಡಬೇಕು ಹಾಗೂ ಅತಿಕ್ರಮವಾಗಿ ಕಟ್ಟಡ ನಿರ್ಮಿಸಿದ್ದರೆ ಅವುಗಳನ್ನು ತೆರವುಗೊಳಿಸಬೇಕು ಎಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

## ಆದಿಕರ್ಮಯೋಗಿ ಅಭಿಯಾನದಡಿಯಲ್ಲಿ ಎರಡು ದಿನಗಳ ತರಬೇತಿ ಕಾರ್ಯಾಗಾರ : ಭೀಮರಾಯ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಸೆ.12–** ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲೂಕು ಆಡಳಿತ ಹಾಗೂ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ನಡೆದ ಆಬಾ ಜನ ಜಾಗೃತೀಯ ಗ್ರಾಮ ಉತ್ಕರ್ಷ ಕಾರ್ಯಕ್ರಮ ನಿಮಿತ್ಯ ಆದಿಕರ್ಮಯೋಗಿ ಅಭಿಯಾನದಡಿಯಲ್ಲಿ ನಡೆದ ಗ್ರಾಮ ಮಟ್ಟದ ಮಾಸ್ಟರ್ ತರಬೇತಿದಾರರಿಗೆ 2 ದಿನಗಳ ಓರಿಯಂಟೇಶನ್ ಮತ್ತು ನಮ್ಮಗ್ರಾಮ–ಸಮೃದ್ಧೀಯ ಕನಸು ಗ್ರಾಮ ಕಾರ್ಯ ಪುಸ್ತಕದ ಕುರಿತು ಚರ್ಚೆ ಕಾರ್ಯಕ್ರಮವನ್ನು ತಹಸೀಲ್ದಾರ್ ಭೀಮರಾಯ ಬಿ.ರಾಮಸಮುದ್ರರವರು ಉದ್ಘಾಟಿಸಿ ಮಾತನಾಡಿ ಕೇಂದ್ರ ಸರ್ಕಾರವು ಶ್ರೀ ಭಗವಾನ ಬಿರ್ಸಾ ಮುಂಡಾರವರ 150 ನೇ ಜನ್ಮದಿನದ ಅಂಗವಾಗಿ ದೇಶದಲ್ಲಿನ ಬುಡಕಟ್ಟು ಜನಾಂಗದ ಹಾಗೂ ಪರಿಶಿಷ್ಟ ಪಂಗಡ ಜನಾಂಗದವರ ಸರ್ವತೋಮುಖ ಅಭಿವೃದ್ದಿಗಾಗಿ ರಾಜ್ಯದಲ್ಲಿನ ಪ್ರಮುಖ 17 ಇಲಾಖೆಗಳ ಒಳಗೊಳ್ಳುವಿಕೆಯಲ್ಲಿ ಆಬಾ ಜನಜಾಗೃತೀಯ ಗ್ರಾಮ ಉತ್ಕರ್ಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು. ಗ್ರಾಮೀಣ ಭಾಗದಲ್ಲಿನ ಪರಿಶಿಷ್ಟ ಪಂಗಡ ಜನಾಂಗದವರಿಗೆ ಸರ್ಕಾರದ ಯೋಜನೆಗಳ ಮಾಹಿತಿ ನೀಡಿ ಸರ್ಕಾರದ ಯೋಜನೆಗಳ ಲಾಭ ಫಲಾನುಭವಿಗಳಿಗೆ ದೊರೆಯುವಂತೆ ನೋಡಿಕೊಳ್ಳಿ ಕಾರ್ಯಕ್ಷೇತ್ರದಲ್ಲಿ ಯಾವುದೆ ತೊಂದರೆ ಕಂಡುಬಂದಲ್ಲಿ ತಾಲೂಕು ಆಡಳಿತದ ಗಮನಕ್ಕೆ ತರುವಂತೆ ತಿಳಿಸಿದರು.



ಮಾಸ್ಟರ್ ತರಬೇತಿದಾರರಾದ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪ ಕಾರ್ಯಗಾರದಲ್ಲಿ ಅದಿಕಾರ್ಮಯೋಗಿ ತರಬೇತಿಯಲ್ಲಿ ಪರಿಶಿಷ್ಟ ಪಂಗಡ ಜನಾಂಗದವರಿಗೆ ಸರ್ಕಾರದಿಂದ ದೊರೆಯುವ ಸೌಲಭ್ಯಗಳ ಕುರಿತು ಅಗತ್ಯ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯಿತಿ ಇ.ಓ.ಖಾಲಿದ್ ಅಹಮ್ಮದ್, ತಾಲೂಕು ಪ.ಪಂಗಡ ಕಲ್ಯಾಣಾಧಿಕಾರಿ ಮಹಾಲಿಂಗಪ್ಪ ಇಂಗಳಾದಳ್ ,ತಾಲೂಕು ಆರೋಗ್ಯಧಿಕಾರಿ ಡಾ.ಶರಣಬಸವರಾಜ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆ ಯರು, ವಿವಿಧ ವಸತಿ ನಿಲಯಗಳ ನಿಲಾಯಪಾಲಕರು ಭಾಗವಹಿಸಿದ್ದರು.

## ಅರೋಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರ ವಿರುದ್ದ ಅವಿಶ್ವಾಸ ಮಂಡನೆಯ ನಿರ್ಣಯಕ್ಕೆ ಗೆಲುವು

**ಯುವ ಮಾರ್ಗ ಸುದ್ದಿ**

**ಮಾನ್ವಿ,ಸೆ.12–**ತಾಲೂಕಿನ ಅರೋಲಿ ಗ್ರಾಮ ಪಂಚಾಯಿತಿಯಲ್ಲಿ ಶುಕ್ರವಾರ ಗ್ರಾಮ ಪಂಚಾಯಿತಿ ಸದಸ್ಯರಿಂದ ಗ್ರಾಮ ಪಂಚಾಯಿತಿ ಅಧ್ಯಕ್ಷರ ವಿರುದ್ದವಾಗಿ ಮಂಡಿಸಲಾದ ಅವಿಶ್ವಾಸ ಮಂಡನೆಯ ನಿರ್ಣಯ ಸಭೆಯಲ್ಲಿ ರಾಯಚೂರು ಸಹಾಯಕ ಉಪವಿಭಾಗಧಿಕಾರಿ ಗಜಾನನ ಬಾಲೆ ಉಪಸ್ಥಿತಿಯಲ್ಲಿ ಗ್ರಾ.ಪಂ.ಅಧ್ಯಕ್ಷರಾಗಿದ್ದ ವೀರರೆಡ್ಡಿನಾಯಕ ರವರ ವಿರುದ್ದವಾಗಿ ನಡೆದ ಅವಿಶ್ವಾಸ ಮಂಡನೆಯ ನಿರ್ಣಯದ ಪರವಾಗಿ 16 ಗ್ರಾಮ ಪಂಚಾಯಿತಿ ಸದಸ್ಯರು ಮತಚಲಾಯಿಸಿದರೆ ಗ್ರಾಮ ಪಂಚಾಯಿತಿ ಅಧ್ಯಕ್ಷರು ಅವಿಶ್ವಾಸ ನಿರ್ಣಯದ ವಿರುದ್ದವಾಗಿ ತಮ್ಮ ಪರವಾಗಿ ತಮ್ಮ ಮತ ಚಾಲಯಿಸಿದರು ಅವಿಶ್ವಾಸ ನಿರ್ಣಯಕ್ಕೆ ಇಬ್ಬರು ಗ್ರಾಮ ಪಂಚಾಯಿತಿಯ ಸದಸ್ಯರು ಗೈರಾಗಿದ್ದರು ಹೆಚ್ಚಿನ ಸದಸ್ಯರು ಅವಿಶ್ವಾಸ ಮಂಡನೆಯ ನಿರ್ಣಯದ ಪರವಾಗಿ ಮತಚಾಲಯಿಸಿದ್ದಾರೆ ಎಂದು ರಾಯಚೂರು ಸಹಾಯಕ ಉಪವಿಭಾಗಧಿಕಾರಿ ಗಜಾನನ ಬಾಲೆಯವರು ಮಾಹಿತಿ ನೀಡಿದರು.



ಅರೋಲಿ ಗ್ರಾಮ ಪಂಚಾಯಿತಿಯು 19 ಸದಸ್ಯರ ಬಲ ಹೊಂದಿದ್ದು ಗ್ರಾಮ ಪಂಚಾಯಿತಿಯ ಅಧ್ಯಕ್ಷರ ಎರಡನೆ ಅವಧಿಯಲ್ಲಿ ಪ.ಪಂಗಡ ಮೀಸಲಾತಿಯಡಿಯಲ್ಲಿ ಗ್ರಾ.ಪಂ .ಅಧ್ಯಕ್ಷರಾಗಿದ್ದ ವೀರರೆಡ್ಡಿನಾಯಕ ವಿರುದ್ದವಾಗಿ ಗ್ರಾಮ ಪಂಚಾ ಯಿತಿಯ 16 ಸದಸ್ಯರು ಅವಿಶ್ವಾಸ ಮಂಡನೆ ನಿರ್ಣಯವನ್ನು ಸಲ್ಲಿಸಿದರಿಂದ ನಡೆದ ಸಭೆಯಲ್ಲಿ ಗ್ರಾ.ಪಂ.ಅಧ್ಯಕ್ಷರಾಗಿದ್ದ ವೀರ ರೆಡ್ಡಿನಾಯಕ ವಿರುದ್ದವಾಗಿ ಮಂಡಿಸಲಾದ ಅವಿಶ್ವಾಸ ಮಂಡನೆ ನಿರ್ಣಯ ಪರವಾಗಿ ಹೆಚ್ಚಿನ ಗ್ರಾ.ಪಂ.ಸದಸ್ಯರು ಮತಚಲಾಯಿಸಿದರಿಂದ ಅವಿಶ್ವಾಸಕ್ಕೆ ಗೆಲುವು ದೊರೆತ್ತಂತೆ ಆಗಿದೆ. ಅರೋಲಿ ಗ್ರಾಮ ಪಂಚಾಯಿತಿ ಪಿ.ಡಿ.ಓ. ಚೌಡಯ್ಯನಾಯಕ . ಕಂದಾಯ ನಿರೀಕ್ಷಕರಾದ ಜಲ್ಲಿ ಹನುಮಂತ ನಾಯಕ, ಸೇರಿದಂತೆ ಇನ್ನಿತರರು ಇದ್ದರು.

## ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನ: ಸೆ.15ರಂದು ಸೈಕಲ್ ಜಾಥಾ

**ರಾಯಚೂರು,ಸೆ.12–** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ನಿಮತ್ತ, ನನ್ನ ಮತ ನನ್ನ ಹಕ್ಕು ಎಂಬ ಧ್ಯೇಯವಾಕ್ಯದೊಂದಿಗೆ ಸೆ.15ರಂದು ಸೈಕಲ್ ಜಾಥಾ ಆಯೋಜಿಸಲಾಗಿದೆ.

ನಗರದ ಯುವಸಮೂಹವು ಸೈಕಲ್ ಜಾಥಾದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ.

ಅಂದು ಬೆಳಗ್ಗೆ 6:30 ಗಂಟೆಗೆ ನಗರದ ಮಹಾತ್ಮಗಾಂಧೀ ಮೈದಾನದಿಂದ ಸೈಕಲ್ ಜಾಥಾ ನಡೆಯಲಿದೆ. ಜಾಥಾದಲ್ಲಿ 14 ವರ್ಷ ಮೇಲ್ಪಟ್ಟ ಪುರುಷರು, ಮಹಿಳೆಯರು, ಲಿಂಗತ್ವ ಅಲ್ಪಸಂಖ್ಯಾತರು, ಸಾರ್ವಜನಿಕರು, ವಿದ್ಯಾರ್ಥಿಗಳು, ಸರ್ಕಾರಿ ನೌಕರರು, ಅಧಿಕಾರಿಗಳು, ಸಂಘ ಸಂಸ್ಥೆಯ ಮುಖಂಡರು ಸೇರಿದಂತೆ ಇನ್ನಿತರರು ಭಾಗವಹಿಸಲು ಸೆ.14ರ ಸಂಜೆ 5ಗಂಟೆಯೊಳಗೆ ಹೆಸರನ್ನು https://docs.google.com/forms/d/e/1FAIpQLSenhrptGtVtdQU9vn6cu7qAlbBFdQ-ZW1cH5clBrCmYVtUQCw/viewform?usp=header ಲಿಂಕ್ ಮೂಲಕ ನೋಂದಾಯಿಸಿಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ.14ರಂದು ಶಿಕ್ಷಕರ ದಿನಾಚರಣೆ ಹಾಗೂ ಆದರ್ಶ ಶಿಕ್ಷಕರ ಪ್ರಶಸ್ತಿ ಪ್ರದಾನ ಸಮಾರಂಭ



**ಯುವ ಮಾರ್ಗ ಸುದ್ದಿ**

**ದೇವದುರ್ಗ,ಸೆ.12–** ತಾಲೂಕು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ವತಿಯಿಂದ ಸೆ.14ರಂದು ತಾಲೂಕಿನ ಹೂವಿನಹೆಡಗಿ ಗ್ರಾಮದ ಶ್ರೀಗಡೆಗೊಳಿಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಶಿಕ್ಷಕರ ದಿನಾಚರಣೆ ಹಾಗೂ ಆದರ್ಶ ಶಿಕ್ಷಕರ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿದೆ ಎಂದು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷ ಶಂಕರಲಿಂಗಯ್ಯ ತಾತ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಶುಕ್ರವಾರ ಮಾತನಾಡಿದರು. ಕಾರ್ಯಕ್ರಮದಲ್ಲಿ ಶಿಖರಮಠದ ಶ್ರೀ ಅಭಿನವ ಕಪಿಲ ಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮೀಜಿ, ತಿಂಥಣಿ ಬ್ರಿಡ್ಜ್‌ನ ಶ್ರೀಸಿದ್ಧರಾಮನಂದಪುರಿ ಸ್ವಾಮೀಜಿ, ದೇವರಗುಡ್ಡ ಶ್ರೀಗಿರಿಮಲ್ಲೇಶ್ವರ ಶಿವಾಚಾರ್ಯ ಸ್ವಾಮೀಜಿ,

ವೀರಗೋಟದ ಶ್ರೀಅಡವಿಲಿಂಗ ಮಹಾರಾಜರು, ಶ್ರೀಸಿದ್ದಯ್ಯತಾತ ಗುರುವಿನ, ಶ್ರೀಸೈಯದ್ ಜಹೀರ್ ಪಾಷಾ ತಾತನವರು ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವಹಿಸುವರು. ಎಂ.ಎಲ್ಸಿ. ಶಶೀಲ್ ಜಿ.ನಮೋಶಿ, ಚಂದ್ರಶೇಖರ ಪಾಟೀಲ್, ಮೇಜರ್ ಆನಂದ, ಭಾನಪ್ರಕಾಶ ಖೇಣೇದ್, ಶ್ರೀದೇವಿ ರಾಜ್ ಶೇಖರನಾಯಕ, ಡಾ.ಹಲುಗೇಶ ಛಲವಾದಿ, ಫಾದರ್ ಟೋಮಿ, ಚನ್ನಪ್ಪ ಬೂದಿನಾಳ, ಡಾ.ಸುಭಾಶ್ಚಂದ್ರ ಪಾಟೀಲ್, ವಿರೂಪಾಕ್ಷಪ್ಪಗೌಡ, ಅಯ್ಯಪ್ಪ ಕೊಂಗಂಡಿ, ಮಲ್ಲಪ್ಪ ಕುಂಬಾರ ಮಸರಕಲ್,ಬಸವರಾಜ ಕೊಪ್ಪರ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಮಧ್ಯಾಹ್ನ 2ಗಂಟೆಗೆ ಆದರ್ಶ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ. ದಿವ್ಯ ಸಾನಿಧ್ಯ ಪರಮಪೂಜ್ಯ ತಪೋಭೂಷಣ ಶಿವಾಚಾರ್ಯರತ್ನ ಶ್ರೀ ಷ॥ ಬ್ರ॥ ವಿದ್ಯಾಮಾನ್ಯ ಶಿವಾಭಿನವ ಜಯಶಾಂತೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಮಹಾಸಂಸ್ಥಾನ ಬೃಹನ್ಮಠ ಚಾಲಹಳ್ಳಿ, ಪರಮಪೂಜ್ಯ ಶ್ರೀ ಷ॥ ಬ್ರ॥ ಬೂದಿಬಸವ ಶಿವಾಚಾರ್ಯ ಮಹಾಸ್ವಾಮಿಗಳು, ಶ್ರೀ ಬೂದಿಬಸವೇಶ್ವರ ಮಹಾಸಂಸ್ಥಾನ ಮಠ ಗಬ್ಬೂರು, ಶ್ರೀ ಶ್ರೀ ಪರಮ ಪೂಜ್ಯ ಶ್ರೀ ನಿಜಲಿಂಗ ಮಹಾಸ್ವಾಮಿಗಳು ಶ್ರೀ ಮೈಲಾರಲಿಂಗೇಶ್ವರ ಸಂಸ್ಥಾನ ದೇವರಗುಂಡುಗುರ್ತಿ, ಪೂಜ್ಯ ಶ್ರೀ ಗುರುಬಸವ ರಾಜಗುರುಗಳು ನಿಜಾನಂದ ಯೋಗಾಶ್ರಮ ಮಲದಕಲ್ ಸಾನ್ನಿಧ್ಯ ವಹಿಸುವರು. ಶಾಸಕಿ ಕರೆಮ್ಮ ಜಿ.ನಾಯಕ ಕಾರ್ಯಕ್ರಮ ಉದ್ಘಾಟಿಸಿ ಪ್ರಶಸ್ತಿ ಪ್ರಧಾನ ಮಾಡುವರು. ಮುಖ್ಯಅತಿಥಿಗಳಾಗಿ ಸಂಸದ ಜಿ.ಕುಮಾರ ನಾಯಕ, ಶಾಸಕರಾದ ಹಂಪನಗೌಡ ಬಾದರ್ಲಿ, ನಾಗರಾಜ ಮಸ್ಕಿ, ಬಿಇಓ ಪಿ.ಮಹಾದೇವಯ್ಯ, ಶಿವರಾಜ ಪೂಜಾರಿ, ಪ್ರಕಾಶ ಖೇಣೇದ್, ಚಂದ್ರಶೇಖರ ಚಿಕ್ಕಬೂದೂರು. ಅತಿಥಿಗಳಾಗಿ ಭಾಗವಹಿಸುವರು. ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ಮಾರೆಪ್ಪ ಕೊತ್ತದೊಡ್ಡಿ. ಅಯ್ಯಪ್ಪ ಕೊಂಗಂಡಿ, ಸಿದ್ದಯ್ಯ ಸ್ವಾಮಿ, ಬಲಭೀಮ ಹೂಗಾರ, ಮಲ್ಲಪ್ಪ ಕುಂಬಾರ, ಬಸವರಾಜ ಕೊಪ್ಪರ, ಗಂಗಣ್ಣ ಪೂಜಾರಿ, ಬಸವರಾಜ ಮಡಿವಾಳ, ಪಾಮನಗೌಡ ಮಜ್ಜಿಗಿ, ಚಂದ್ರು ಹಿರೇಬುದುರ್ ಇತರರಿದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H